ಸಂಪುಟ : 9 ಸಂಚಿಕೆ 58 ಪುಟ : 4 ಬೆಲೆ: 3.00 ಬುಧವಾರ ಎಪ್ರಿಲ್ 3 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 58 Pages : 4 Price : 3.00 Wednesday April 3 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಮೃತ ಸೈನಿಕನ ವಿಚ್ಛೇದಿತ ಪತ್ನಿಗೆ ವಿಧವಾ ಸೌಲಭ್ಯ ಕಲ್ಪಿಸಲು ಸೇನಾ ಪ್ರಾಧಿಕಾರಕ್ಕೆ ಹೈಕೋರ್ಟ್ ಆದೇಶ




■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಅಸಾಧಾರಣ ಸಂದರ್ಭಗಳಲ್ಲಿ ಹೊರತುಪಡಿಸಿ, ಇನ್ನುಳಿದಂತೆ ಏಕಪಕ್ಷೀಯ ವಿಚ್ಛೇದನ ಆದೇಶವನ್ನು ಪರಿಗಣಿಸಲಾಗದು ಎಂದು ಅಭಿಪ್ರಾಯಪಟ್ಟಿರುವ ಹೈಕೋರ್ಟ್, ಮೃತ ಸೈನಿಕನ ವಿಚ್ಛೇದಿತ ಪತ್ನಿಗೆ ಎಲ್ಲ ರೀತಿಯ ವಿಧವಾ ಸೌಲಭ್ಯಗಳನ್ನು ಕಲ್ಪಿಸಲು ಸೇನಾ ಪ್ರಾಧಿಕಾರಕ್ಕೆ ಆದೇಶ ನೀಡಿದೆ.

ಮೃತ ಮಾಜಿ ಸೈನಿಕನ ಪತ್ನಿಗೆ ವಿಧವಾ ಗುರುತಿನ ಚೀಟಿ ನಿರಾಕರಿಸಿದ್ದ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ವಿಭಾಗದ ಜಂಟಿ ನಿರ್ದೇಶಕರ ಕ್ರಮ ಪ್ರಶ್ನಿಸಿ, ಸೈನಿಕನ ಪತ್ನಿ ಪಾರ್ವತಮ್ಮ ಎಂಬವರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ನ್ಯಾಯಪೀಠ ಈ ಆದೇಶ ನೀಡಿದೆ. ಅಲ್ಲದೆ, ಮುಂದಿನ ಎರಡು ತಿಂಗಳಲ್ಲಿ ಅರ್ಜಿದಾರರಿಗೆ ಲಭ್ಯವಿರುವ ಎಲ್ಲ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ನಿರ್ದೇಶನ ನೀಡಿದೆ. ಮಾಜಿ ಸೈನಿಕನ ಪತ್ನಿಯಾಗಿದ್ದರೂ ಸೌಲಭ್ಯಗಳನ್ನು ನೀಡಲು ನಿರಾಕರಿಸುವುದಕ್ಕೆ ವಿಚ್ಛೇದಿತೆ ಎಂಬ ಕಳಂಕ ಹೊರಿಸಲು ಸಾಧ್ಯವಿಲ್ಲ ಎಂದು ಪೀಠ ತಿಳಿಸಿತು.

ಪ್ರಸ್ತುತ ಪ್ರಕರಣದಲ್ಲಿ ಈ ಹಿಂದೆ ಏಕಪಕ್ಷೀಯವಾಗಿ ಆದೇಶ ನೀಡಲಾಗಿತ್ತು. ಇದನ್ನು ಪ್ರಶ್ನಿಸಿದ್ದ ಅರ್ಜಿ ವಿಚಾರಣಾ ಹಂತದಲ್ಲಿರುವ ಸಂದರ್ಭದಲ್ಲಿ ಪತಿ ಮೃತಪಟ್ಟಿದ್ದಾರೆ. ಹೀಗಾಗಿ ಅರ್ಜಿ ಮುಕ್ತಾಯಗೊಳಿಸಲಾಗಿದೆ. ಇದಕ್ಕಾಗಿ ಅರ್ಜಿದಾರರನ್ನು ವಿಚ್ಛೇದಿತೆ ಎಂಬುದಾಗಿ ನೋಡುವಂತಿಲ್ಲ ಎಂದು ಪೀಠ ಹೇಳಿದೆ.

ಅಸಾಧಾರಣ ಸಂದರ್ಭಗಳನ್ನು ಹೊರತುಪಡಿಸಿ ಇತರೆ ಸಂದರ್ಭಗಳಲ್ಲಿ ಕಾನೂನು ಪ್ರಕಾರ ಇದನ್ನು ಪರಿಗಣಿಸಲಾಗದು. ಆದ್ದರಿಂದ, ಅರ್ಜಿದಾರರ ಮನೆಯಲ್ಲಿ ದುಡಿಯುತ್ತಿದ್ದ ಏಕೈಕ ವ್ಯಕ್ತಿಯನ್ನು ಕಳೆದುಕೊಂಡಿದ್ದು, ಸಂಕಷ್ಟಕ್ಕೆ ಸಿಲುಕಿದ್ದಾರೆ. ಈ ಸಂದರ್ಭದಲ್ಲಿ ಪ್ರತಿವಾದಿಗಳು ಸಹಾನುಭೂತಿ ತೋರಿಸಬೇಕು ಎಂದು ತಿಳಿಸಿದೆ.

ಪ್ರಕರಣದ ಹಿನ್ನೆಲೆ: ಅರ್ಜಿದಾರರಾದ ಪಾರ್ವತಮ್ಮ ಸೈನಿಕರಾಗಿದ್ದ ಎಲ್.ರಾಮಕೃಷ್ಣ ಎಂಬವರನ್ನು 1987ರಲ್ಲಿ ವಿವಾಹವಾಗಿದ್ದರು. 1995ರಲ್ಲಿ ಹೆಣ್ಣು ಮಗುವಿಗೆ ಜನ್ಮ ನೀಡಿದ್ದರು. ಆ ಸಂದರ್ಭದಲ್ಲಿ ರಾಮಕೃಷ್ಣ ಸೇನೆಯಲ್ಲಿ ಸೇವೆಯಲ್ಲಿದ್ದ ಪರಿಣಾಮ ಅರ್ಜಿದಾರರನ್ನು ಆತನ ತಂದೆ ತಾಯಿಯೊಂದಿಗೆ ಬಿಟ್ಟಿದ್ದರು. ಅಲ್ಲದೆ, ವರ್ಷಕ್ಕೆ ಎರಡು ತಿಂಗಳ ಕಾಲ ರಜೆಗೆ ಮನೆಗೆ ಬರುತ್ತಿದ್ದರು. ಈ ನಡುವೆ 2016ರಲ್ಲಿ ಸೇನೆಗೆ ರಾಜೀನಾಮೆ ನೀಡಿ ಮನೆಗೆ ಹಿಂದಿರುಗಿದ್ದರು. ಇದಾದ ಬಳಿಕ ದಂಪತಿ ನಡುವೆ ಮನಸ್ತಾಪಕ್ಕೆ ಕಾರಣವಾಗಿತ್ತು. ಮುಂದುವರೆದು ಅರ್ಜಿದಾರರು, ರಾಮಕೃಷ್ಣ ಮತ್ತವರ ಕುಟುಂಬಸ್ಥರ ವಿರುದ್ಧ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು.

ಈ ನಡುವೆ ರಾಮಕೃಷ್ಣ ಅರ್ಜಿದಾರರಾದ ಪಾರ್ವತಮ್ಮರಿಂದ ವಿಚ್ಛೇದನ ಮಂಜೂರು ಮಾಡುವಂತೆ ಕೋರಿ 2017ರಲ್ಲಿ(ಮದುವೆಯಾದ 30 ವರ್ಷಗಳ ಬಳಿಕ) ಕೌಟುಂಬಿಕ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ನಡೆಸಿದ್ದ ಕೌಟುಂಬಿಕ ನ್ಯಾಯಾಲಯ ಹಲವು ಬಾರಿ ನೋಟಿಸ್ ಜಾರಿ ಮಾಡಿದ್ದರೂ, ಪಾರ್ವತಮ್ಮ ಹಾಜರಾಗಿರಲಿಲ್ಲ. ಈ ಹಿನ್ನೆಲೆಯಲ್ಲಿ ಏಕಪಕ್ಷೀಯವಾಗಿ ವಿವಾಹ ವಿಚ್ಛೇದನ ಮಂಜೂರು ಮಾಡಿ ಆದೇಶಿಸಿತ್ತು.

ವಿಚ್ಛೇದನ ಮಂಜೂರು ಮಾಡಿರುವ ಅಂಶ ಗೊತ್ತಾಗುತ್ತಿದ್ದಂತೆ ಅರ್ಜಿದಾರರಾದ ಪಾವರ್ತಮ್ಮ, ವಿಚ್ಛೇದನ ಆದೇಶವನ್ನು ಹಿಂಪಡೆಯುವಂತೆ ಮನವಿ ಮಾಡಿದ್ದರು. ಅರ್ಜಿ ವಿಚಾರಣಾ ಹಂತದಲ್ಲಿರುವ ಸಂದರ್ಭದಲ್ಲಿಯೇ ರಾಮಕೃಷ್ಣ ಮೃತಪಟ್ಟಿದ್ದರು. ಪರಿಣಾಮ ವಿವಾಹ ವಿಚ್ಛೇದನ ರದ್ದುಕೋರಿ ಸಲ್ಲಿಸಿದ್ದ ಅರ್ಜಿಯನ್ನು ಕೌಟುಂಬಿಕ ನ್ಯಾಯಾಲಯ ಮುಕ್ತಾಯಗೊಳಿಸಿತ್ತು.

ಇದಾದ ಬಳಿಕ ತನಗೆ ಮೃತ ಮಾಜಿ ಸೈನಿಕನ ಪತ್ನಿ(ವಿಧವೆ) ಎಂಬ ಹೆಸರಿನ ಗುರುತಿನ ಚೀಟಿ ನೀಡುವಂತೆ ಕೋರಿ ಬೆಂಗಳೂರಿನ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ವಿಭಾಗಕ್ಕೆ ಮನವಿ ಮಾಡಿದ್ದರು. ಈ ಮನವಿಯನ್ನು ತಿರಸ್ಕರಿಸಿದ್ದ ಪರಿಣಾಮ ಹೈಕೋರ್ಟ್ ಮೆಟ್ಟಿಲೇರಿದ್ದರು.

### ಪೊಲೀಸ್ ಧ್ವಜ ದಿನಾಚರಣೆ ಕಾರ್ಯಕ್ರಮದಲ್ಲಿ ನಿವೃತ್ತ ಪೊಲೀಸ್ ವರಿಷ್ಠಾಧಿಕಾರಿ ಟಿ. ಫೈಜುದ್ದೀನ್

## ಸಿಬ್ಬಂದಿಗಳು ಸದೃಢವಾಗಿರುವುದು ಅತ್ಯಗತ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಶಾಂತಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಪೊಲೀಸ್ ಇಲಾಖೆಯ ಪಾತ್ರ ಮಹತ್ವದ್ದಾಗಿದೆ ಎಂದು ನಿವೃತ್ತ ಪೊಲೀಸ್ ವರಿಷ್ಠಾಧಿಕಾರಿ ಟಿ. ಫೈಜುದ್ದೀನ್ ಅಭಿಪ್ರಾಯಪಟ್ಟರು.

ಗದಗ ಜಿಲ್ಲಾ ಪೊಲೀಸ್ ಇಲಾಖೆಯಿಂದ ಮಂಗಳವಾರ ಜಿಲ್ಲಾ ಸಶಸ್ತ್ರ ಪೊಲೀಸ್ ಘಟಕ ಮಲ್ಲಸಮುದ್ರ-ಗದಗ ಮೈದಾನದಲ್ಲಿ ಪೊಲೀಸ್ ಧ್ವಜ ದಿನಾಚರಣೆ ನಿಮಿತ್ತ ಆಯೋಜಿಸಿದ್ದ ನಿವೃತ್ತರ ಸೇವಾ ಸಂಸ್ಮರಣೆ ಮತ್ತು ಗೌರವ ಸಮರ್ಪಣಾ ಸಮಾರಂಭದ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಇಲಾಖೆಯಲ್ಲಿ ಪ್ರತಿ ದಿನ ಒತ್ತಡದಲ್ಲಿ ಕಾರ್ಯನಿರ್ವಹಿಸುವ ಎಲ್ಲ ನೌಕರರು ಮಾನಸಿಕ ಹಾಗೂ ದೈಹಿಕವಾಗಿ ಸದೃಢವಾಗಿರುವುದು ಅವಶ್ಯಕವಾಗಿದೆ. ಅವರು ತಮ್ಮ ಸೇವಾ ನಿರತ ದಿನಗಳನ್ನು ಸ್ಮರಿಸಿಕೊಳ್ಳುತ್ತಾ ಪೊಲೀಸ್ ಇಲಾಖೆ ಹಾಗೂ ಮೇಲಧಿಕಾರಿಗಳಿಗೆ ಇನ್ನೂ ಹೆಚ್ಚಿನ ಗೌರವ ತರುವ ಕಾರ್ಯ ಮಾಡಬೇಕೆಂದು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ಹಗಲು-ರಾತ್ರಿ ಎನ್ನದೇ ಕಾನೂನು ಸುವ್ಯವಸ್ಥೆ ಹಾಗೂ ಶಾಂತತೆ ಕಾಪಾಡಲು ಪೊಲೀಸ್ ಸಿಬ್ಬಂದಿಗಳು ಸದಾ ಕಾರ್ಯನಿರತರಾಗಿರುತ್ತಾರೆ. 1965ರಿಂದ ಪೊಲೀಸ್ ಧ್ವಜ ದಿನಾಚರಣೆ ಆಚರಿಸಲಾಗುತ್ತಿದ್ದು, ಪ್ರಸಕ್ತ ವರ್ಷವೂ ಏಪ್ರಿಲ್ 2ರಂದು ರಾಜ್ಯದ ಎಲ್ಲಾ ಪೊಲೀಸ್ ಘಟಕಗಳಲ್ಲಿ ಪೊಲೀಸ್ ಧ್ವಜ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸಿ, ನಿವೃತ್ತರಾದ ಅಧಿಕಾರಿ ಹಾಗೂ ಸಿಬ್ಬಂದಿಗಳನ್ನು ಈ ಸಮಯದಲ್ಲಿ ಸ್ಮರಿಸಿಕೊಳ್ಳಲು ಹಾಗೂ ನಿವೃತ್ತಿ ನಂತರ ಅವರಿಗೆ ಉತ್ತೇಜನ ನೀಡಲು ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.



> ಪ್ರಸಕ್ತ ವರ್ಷ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮನಿಧಿಯಿಂದ 39 ಜನ ನಿವೃತ್ತ ಪೊಲೀಸ್ ಅಧಿಕಾರಿ/ಸಿಬ್ಬಂದಿಗಳಿಗೆ 1,27,950 ರೂ.ಗಳ ವೈದ್ಯಕೀಯ ಧನ ಸಹಾಯ ಪಾವತಿಸಲಾಗಿದೆ ಮತ್ತು ಮರಣ ಹೊಂದಿದ 22 ಜನ ನಿವೃತ್ತ ಪೊಲೀಸ್ ಅಧಿಕಾರಿಗಳ ಅಂತ್ಯಸಂಸ್ಕಾರಕ್ಕೆ 2,20,000 ರೂ. ಧನ ಸಹಾಯ ನೀಡಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ತಿಳಿಸಿದರು.

ಪ್ರತಿ ವರ್ಷ ಪೊಲೀಸ್ ಧ್ವಜ ದಿನಾಚರಣೆ ಸಂದರ್ಭದಲ್ಲಿ ಪೊಲೀಸ್ ಧ್ವಜಗಳನ್ನು ಮಾರಾಟ ಮಾಡಿ, ಅದರಿಂದ ಬಂದ ಹಣದಲ್ಲಿ ಶೇ.50ರಷ್ಟು ಹಣವನ್ನು ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮ ನಿಧಿಗೆ ಮತ್ತು ಶೇ.50ರಷ್ಟು ಹಣವನ್ನು ಕೇಂದ್ರ ನಿವೃತ್ತ ಪೊಲೀಸ್ ಕಲ್ಯಾಣ ನಿಧಿಗೆ ಜಮಾ ಮಾಡಿ ಈ ನಿಧಿಯನ್ನು ಸೇವೆಯಲ್ಲಿರುವ ಹಾಗೂ ನಿವೃತ್ತ ಪೊಲೀಸ್ ಅಧಿಕಾರಿಗಳ, ಸಿಬ್ಬಂದಿಗಳ ವೈದ್ಯಕೀಯ ಚಿಕಿತ್ಸಾ ವೆಚ್ಚ ಮಂಜೂರಿಸುವ ಸಲುವಾಗಿ ವಿನಿಯೋಗಿಸಲಾಗುತ್ತದೆ. ಪ್ರತಿ ಮೂರು ತಿಂಗಳಿಗೊಮ್ಮೆ ಜಿಲ್ಲೆಯ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮ ನಿಧಿ ಸಮಿತಿ ಸಭೆ ಕರೆದು ಸದರಿ ಸಭೆಗಳಲ್ಲಿ ನಿವೃತ್ತ ಪೊಲೀಸ್ ಅಧಿಕಾರಿಗಳ ಕುಂದು-ಕೊರತೆಗಳನ್ನು ಆಲಿಸಿ, ನಿವಾರಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ. ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳು ಕ್ಯಾಂಟೀನ್ ಉಪಯೋಗ ಪಡೆಯುತ್ತಿದ್ದು, ಈ ಸದುಪಯೋಗವನ್ನು ನಿವೃತ್ತ ಪೊಲೀಸ್ ಅಧಿಕಾರಿಗಳೂ ಸಹ ಪಡೆಯುವಂತೆ ವ್ಯವಸ್ಥೆ ಮಾಡಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಸೇವಾ ನಿವೃತ್ತರಿಗೆ ಗೌರವ ಸಮರ್ಪಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಡಿಎಸ್ಪಿ ಡಿ.ಬಿ. ಇನಾಮದಾರ ಸೇರಿದಂತೆ ಪೊಲೀಸ್ ಸಿಬ್ಬಂದಿಗಳು, ಗಣ್ಯರು ಹಾಜರಿದ್ದರು. ಡಿಎಸ್‌ಪಿ ಡಿ.ಎಸ್. ಧನಗರ ಸ್ವಾಗತಿಸಿದರು. ಎಂ.ಟಿ. ಭಟ್ ಕಾರ್ಯಕ್ರಮ ನಿರೂಪಿಸಿದರು. ಡಿಎಸ್‌ಪಿ ಪ್ರಭುಗೌಡ ಕಿರೆದಳ್ಳಿ ವಂದಿಸಿದರು.



### ವಿಶೇಷ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಸಿ.ಬಿ. ದೇವರಮನಿ

## ಪ್ರಜಾಪ್ರಭುತ್ವ ಹಬ್ಬದಲ್ಲಿ ಹೆಮ್ಮೆಯಿಂದ ಪಾಲ್ಗೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಚುನಾವಣೆ ಎಂಬುದು ಪ್ರಜಾಪ್ರಭುತ್ವದ ಹಬ್ಬ ಇದ್ದಂತೆ. ಎಲ್ಲರೂ ಖುಷಿಯಿಂದ ಪಾಲ್ಗೊಳ್ಳಬೇಕು ಎಂದು ಜಿ.ಪಂ ಉಪಕಾರ್ಯದರ್ಶಿ ಸಿ.ಬಿ. ದೇವರಮನಿ ಹೇಳಿದರು.

ಗದಗ ತಾಲೂಕಿನ ಕುರ್ತಕೋಟಿ ಗ್ರಾಮದಲ್ಲಿ ಪ್ರಗತಿಯಲ್ಲಿರುವ ಕಂದಕ ಬದು ನಿರ್ಮಾಣ ಕಾಮಗಾರಿ ಪರಿಶೀಲನೆ ನಡೆಸಿ, ನಂತರ ಗದಗ ಜಿಲ್ಲಾ ಸ್ವೀಪ್ ಸಮಿತಿ, ತಾಲೂಕು ಸ್ವೀಪ್ ಸಮಿತಿಯಿಂದ ಆಯೋಜಿಸಲಾಗಿದ್ದ ವಿಶೇಷ ಮತದಾನ ಜಾಗೃತಿ ಹಾಗೂ ಮತದಾನ ಪ್ರತಿಜ್ಞಾ ವಿಧಿ ಬೋಧನೆ ಮಾಡಿ ಮಾತನಾಡಿದರು.

ಲೋಕಸಭೆ ಚುನಾವಣೆ-2024 ಅಂಗವಾಗಿ ಮತದಾರ ಜಾಗೃತಿ ಮೂಡಿಸಲು ವಿಶೇಷವಾಗಿ ಕಾರ್ಯಕ್ರಮ ಆಯೋಜನೆ ಮಾಡಿರುವುದು ಅತ್ಯಂತ ಖುಷಿಯ ವಿಚಾರವಾಗಿದೆ. ದೇಶ, ನಾಡು ಕಟ್ಟುವಲ್ಲಿ ಪ್ರತಿಯೊಬ್ಬರ ಮತ ಮುಖ್ಯವಾಗಿರುತ್ತದೆ. ಯಾರೊಬ್ಬರೂ ಮತದಾನ ಮಾಡಲು ನಿಷ್ಕಾಳಜಿ ತೋರಬಾರದು. ಚುನಾವಣೆ ಎಂಬುದು ಪ್ರಜಾಪ್ರಭುತ್ವದ ಹಬ್ಬವಾಗಿದೆ. ಯಾವುದೇ ಆಸೆ-ಆಮಿಷಕ್ಕೆ ಒಳಗಾಗದೆ ಖುಷಿಯಿಂದ ಮತ ಚಲಾಯಿಸಬೇಕೆಂದು ಹೇಳಿದರು.



ತಾ.ಪಂ ಸಹಾಯಕ ನಿರ್ದೇಶಕ ಕುಮಾರ್ ಪೂಜಾರ್ ಮಾತನಾಡಿ, ಪ್ರಜಾಪ್ರಭುತ್ವದಲ್ಲಿ ಎಲ್ಲರ ಮತಕ್ಕೂ ಒಂದೇ ಮೌಲ್ಯ ಇರುತ್ತದೆ. ಯಾರೂ ಕೂಡ ಅಸಡ್ಡೆ ತೋರಕೂಡದು. ನಮ್ಮ ಹಕ್ಕನ್ನು ನಾವು ಕಡ್ಡಾಯವಾಗಿ ಚಲಾಯಿಸಬೇಕು ಎಂದು ತಿಳಿಸಿದರು.

ಕಾಮಗಾರಿ ಸ್ಥಳದಲ್ಲಿ ಹಾಜರಿದ್ದ ಕೂಲಿಕಾರರ ಸಹಾಯದಿಂದ 'ಮೇ 7' ಎಂದು ಚಿತ್ರ ಬಿಡಿಸಲಾಯಿತು. ನಂತರ ಪ್ರತಿಜ್ಞಾ ವಿಧಿ ಭೋದನೆ ಮಾಡಲಾಯಿತು.

> ಮತಗಟ್ಟೆ ಕೇಂದ್ರದಲ್ಲಿ ಮೂಲಭೂತ ಸೌಕರ್ಯಗಳ ಕುರಿತು ಸವಿಸ್ತಾರವಾಗಿ ತಿಳಿಸಿದ ಸಿ.ಬಿ. ದೇವರಮನಿ, 18 ವರ್ಷ ಮೇಲ್ಪಟ್ಟ ಯುವಕರು, ವೃದ್ಧರು, ವಿಕಲಚೇತನ ಮತದಾರರು ನಿರ್ಭೀತಿಯಿಂದ ಮೇ 7ರಂದು ನಡೆಯುವ ಲೋಕಸಭೆ ಚುನಾವಣೆಯಲ್ಲಿ ಮತ ಚಲಾಯಿಸಿ ಶೇ.100ರಷ್ಟು ಮತದಾನ ಮಾಡಿ ಯೋಗ್ಯ ಹಾಗೂ ಸಮರ್ಥ ನಾಯಕರನ್ನು ಆಯ್ಕೆ ಮಾಡಬೇಕೆಂದು ಸಾರ್ವಜನಿಕರಲ್ಲಿ ಮನವಿ ಮಾಡಿಕೊಂಡರು.

ಈ ಸಂದರ್ಭದಲ್ಲಿ ತಾ.ಪಂ ಸಹಾಯಕ ನಿರ್ದೇಶಕ ಕುಮಾರ್ ಪೂಜಾರ್, ಜಿ.ಪಂ ನರೇಗಾ ಸಿಬ್ಬಂದಿಗಳಾದ ಎಡಿಪಿಸಿ ಕಿರಣ್ ಕುಮಾರ್, ಡಿಎಮ್‌ಆಯ್‌ಎಸ್ ಮಲ್ಲಿಕಾರ್ಜುನ ಸರ್ವಿ, ಡಿಐಇಸಿ ವಿ.ಬಿ. ಸಜ್ಜನ ಹಾಗೂ ತಾಲೂಕು ನರೇಗಾ ಸಿಬ್ಬಂದಿ ಟಿಐಇ ಸಿ.ವಿರೇಶ್, ಬಿಎಫ್‌ಟಿ ಸೋಮಶೇಖರ್, ಗಿರಿಜಾ ಮತ್ತು ನರೇಗಾ ಕೂಲಿಕಾರರು ಹಾಜರಿದ್ದರು.

## ಜವಾಬ್ದಾರಿ ಅರಿತು ಮತದಾನ ಮಾಡಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಜೆಗಳೇ ತಮ್ಮ ಪ್ರಭುಗಳನ್ನು ಆಯ್ಕೆ ಮಾಡಲು ಅವಕಾಶ ಕಲ್ಪಿಸಿದೆ. ಆದ್ದರಿಂದ ಸಂವಿಧಾನ ನೀಡಿದ ಮತದಾನದ ಹಕ್ಕನ್ನು ಪ್ರತಿಯೊಬ್ಬ ನಾಗರಿಕ ತನ್ನ ಜವಾಬ್ದಾರಿ ಎಂದು ಅರಿತು ಮತದಾನದಲ್ಲಿ ಪಾಲ್ಗೊಳ್ಳಬೇಕು ಎಂದು ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಕೆ.ಸಿ. ಕಡೂರ ಹೇಳಿದರು.

ತಾಲೂಕಿನ ಆದರಹಳ್ಳಿ ಗ್ರಾಮ ಪಂಚಾಯಿತಿಯ ಸಂಕದಾಳ ಗ್ರಾಮದಲ್ಲಿಯ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯ ಕಾಮಗಾರಿ ಸ್ಥಳದಲ್ಲಿ ಮತದಾರರ ಜಾಗೃತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.




ಶೇ.100ರಷ್ಟು ಪ್ರಮಾಣದಲ್ಲಿ ಮತ ಚಲಾಯಿಸುವುದರಿಂದ ಸದೃಢ ಪ್ರಜಾಪ್ರಭುತ್ವ ಕಟ್ಟಲು ಸಾಧ್ಯ. ಆ ದಿಸೆಯಲ್ಲಿ ಸಂವಿಧಾನಾತ್ಮಕ ಹಕ್ಕಾದ ಮತದಾನ ಕಾರ್ಯದಲ್ಲಿ ತಪ್ಪದೇ ಪಾಲ್ಗೊಳ್ಳಬೇಕು. ಆದ್ದರಿಂದ ತಾಲೂಕು ವ್ಯಾಪ್ತಿಯಲ್ಲಿಯ, ಗ್ರಾಮೀಣ ಪ್ರದೇಶದಲ್ಲಿಯ ಉದ್ಯೋಗ ಖಾತ್ರಿ ಕಾಮಗಾರಿ ಸ್ಥಳದಲ್ಲಿ ಕಡ್ಡಾಯವಾಗಿ ಮತದಾನ ಮಾಡುವಂತೆ ಪ್ರೇರಣೆ ನೀಡುವ ಕಾರ್ಯ ಮಾಡುತಿದ್ದೇವೆ. ಮೇ 7ರಂದು ಲೋಕಸಭೆ ಚುನಾವಣೆಗೆ ಮತದಾನಕ್ಕೆ ನಿಗದಿಪಡಿಸಲಾಗಿದೆ. ಎಲ್ಲರೂ ಪ್ರಜಾಪ್ರಭುತ್ವದ ಮತದಾನ ಹಬ್ಬದಲ್ಲಿ ಭಾಗಿಯಾಗುವಂತೆ ತಿಳಿಸಿದರಲ್ಲದೆ, ಈ ಬೇಸಿಗೆ ಅವಧಿಯಲ್ಲಿ ಹೆಚ್ಚು ಕೆಲಸ ಒದಗಿಸಲು ನರೇಗಾ ಯೋಜನೆಯಡಿ ಬದು ನಿರ್ಮಾಣ ಕಾಮಗಾರಿ ಆರಂಭಿಸಲಾಗಿದ್ದು, ರೈತರು ಈ ಯೋಜನೆಯ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಗ್ರಾ.ಪಂ ಕಾರ್ಯದರ್ಶಿ ಟಿ.ಆರ್. ಪವಾರ, ಸಿಬ್ಬಂದಿಗಳಾದ ಬಸಪ್ಪ ಲಮಾಣಿ, ತೀರಮಲಪ್ಪ ವಡ್ಡರ, ಟಿಆರ್‌ಎಂ ಗೌರಮ್ಮ ಎನ್.ಲಮಾಣಿ, ವಿಆರ್‌ಡಬ್ಲು ನಾಮದೇವ ಲಮಾಣಿ, ನರೇಗಾ ಕಾಯಕ ಬಂಧುಗಳು ಇದ್ದರು.

### ಜಿಲ್ಲಾ ಪೊಲೀಸ್ ಧ್ವಜ ದಿನಾಚರಣೆಯಲ್ಲಿ ನಿವೃತ್ತ ಪೊಲೀಸ್ ಅಧೀಕ್ಷಕ ಎ.ಎಸ್. ಮಗೆಣ್ಣವರ

## ಸಿಬ್ಬಂದಿಗೆ ತಾಂತ್ರಿಕ ತರಬೇತಿ ಅಗತ್ಯವಿದೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಇಂದು ಪೊಲೀಸ್ ಇಲಾಖೆಗೆ ವಿವಿಧ ವಿಷಯಗಳ ಪದವಿ, ಸ್ನಾತಕೋತ್ತರ ಪದವೀಧರರು ಸೇರಿಕೊಳ್ಳುತ್ತಿದ್ದಾರೆ. ಅವರಿಗೆ ಇಂದು ಅಕ್ಷರಸ್ಥರು, ಅನಕ್ಷರಸ್ಥರು ಎಂಬ ಬೇಧವಿಲ್ಲದೆ ಬಹುತೇಕರನ್ನು ವಂಚಿಸುತ್ತಿರುವ ಸೈಬರ್ ಕ್ರೈಮ್ ಬಗ್ಗೆ ಮತ್ತು ಅಪರಾಧಿಗಳನ್ನು ಶಿಕ್ಷೆಗೆ ಒಳಪಡಿಸಲು ಅಗತ್ಯವಿರುವ ಸಾಕ್ಷಿ ಸಂಗ್ರಹ, ತನಿಖೆಗೆ ಅಗತ್ಯವಿರುವ ತಾಂತ್ರಿಕ ಜ್ಞಾನದ ತರಬೇತಿ ನೀಡಬೇಕೆಂದು ನಿವೃತ್ತ ಪೊಲೀಸ್ ಅಧೀಕ್ಷಕ ಎ.ಎಸ್. ಮಗೆಣ್ಣವರ ಹೇಳಿದರು.



ಅವರು ಮಂಗಳವಾರ ಬೆಳಿಗ್ಗೆ ಧಾರವಾಡ ಪೊಲೀಸ್ ಇಲಾಖೆ ಜಿಲ್ಲಾ ಸಶಸ್ತ್ರ ಮೀಸಲು ಪೊಲೀಸ್ ಪಡೆಯ ಕವಾಯತು ಮೈದಾನದಲ್ಲಿ ಆಯೋಜಿಸಿದ್ದ ಪೊಲೀಸ್ ಧ್ವಜ ದಿನಾಚರಣೆ ಮತ್ತು ಸೇವಾ ನೀವೃತ್ತರಿಗೆ ಗೌರವ ಸನ್ಮಾನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

**ಆಕರ್ಷಕ ಪಥಸಂಚಲನ**

ಪೊಲೀಸ್ ಧ್ವಜ ದಿನಾಚರಣೆ ಕಾರ್ಯಕ್ರಮದಲ್ಲಿ ಪರೇಡ್ ಕಮಾಂಡರ್, ಜಿಲ್ಲಾ ಸಶಸ್ತ್ರ ಮೀಸಲು ಪಡೆಯ ಆರ್‌ಪಿಐ ವಿಠ್ಠಲ ಟಿ.ಕೋಕಟನೂರ ಹಾಗೂ 2ನೇ ಪರೇಡ್ ಕಮಾಂಡರ್ ಆರ್.ಎಸ್. ಗುಡನಟ್ಟಿ ಅವರ ನಾಯಕತ್ವದಲ್ಲಿ ಆಕರ್ಷಕ ಪಥ ಸಂಚಲನ ಜರುಗಿತು. ಪಥಸಂಚಲನದ ವಿವಿಧ ತಂಡಗಳಿಗೆ ಮಲ್ಲನಗೌಡ ಗುತ್ತರಗಿ, ಮಂಜುನಾಥ ಕುರಗೋಡ, ಆನಂದಕುಮಾರ.ಬಿ., ಮಲ್ಲಿಕಾರ್ಜುನ ನರಗುಂದ, ಲಕ್ಷ್ಮೀ ದೇಗಿನಾಳ ಮತ್ತು ವಾಸು ರಕ್ಷೇದ ನೇತೃತ್ವ ವಹಿಸಿದ್ದರು. ಆರ್.ಎಸ್.ಐ. ವೈ.ಎಫ್. ಭಜಂತ್ರಿ ಹಾಗೂ ಸ್ಟಿಕ್ ಮೇಜರ್ ಸಾಗರ ಬಸರಕೋಡಿ ಅವರ ತಂಡ ಹಿನ್ನಲೆ ಸಂಗೀತದೊಂದಿಗೆ ಪೊಲೀಸ್ ಬ್ಯಾಂಡ್ ನುಡಿಸಿತು.

▸▸ 3ನೇ ಪುಟಕ್ಕೆ

## ಸಂಪಾದಕೀಯ

# ಈಶ್ವರಪ್ಪಗೆ ಖೆಡ್ಡಾ ತೋಡಲು ಬಿಜೆಪಿ ಮಾಸ್ಟರ್ ಪ್ಲಾನ್

ಲೋಕಸಭೆ ಚುನಾವಣೆಯ ಕರ್ನಾಟಕದ ಕಣ ಚಿತ್ರಣ ಬಹುತೇಕ ಸ್ಪಷ್ಟವಾದಂತಾಗಿದೆ. ಯಾವುದೇ ಕ್ಷೇತ್ರದಲ್ಲಿಯೂ ಅಭ್ಯರ್ಥಿಗಳ ಬದಲಾವಣೆ ಆಗುವ ಸಾಧ್ಯತೆಗಳು ಉಳಿದಿಲ್ಲ. ಆದರೆ ಅನೇಕ ಕ್ಷೇತ್ರಗಳಲ್ಲಿ ಬಂಡಾಯದ ಬೇಗುದಿ ಇನ್ನು ತಣ್ಣಗಾಗಿಲ್ಲ.

ಕಾಂಗ್ರೆಸ್‌ಗೆ ಹೋಲಿಕೆ ಮಾಡಿದಲ್ಲಿ ಬಿಜೆಪಿಯಲ್ಲಿ ಬಂಡಾಯ ಅಭ್ಯರ್ಥಿಗಳ ಸಂಖ್ಯೆ ಹೆಚ್ಚಾಗಿದೆ. ವಿಶೇಷವಾಗಿ ಶಿವಮೊಗ್ಗ ಕ್ಷೇತ್ರ ಕೆ.ಎಸ್. ಈಶ್ವರಪ್ಪ ಸ್ಪರ್ಧೆಯಿಂದಾಗಿ ರಾಜ್ಯದ ಗಮನ ಸೆಳೆಯುತ್ತಿದೆ.

ದಾವಣಗೆರೆ, ಬೆಳಗಾವಿ, ಕೊಪ್ಪಳ ಬಿಜೆಪಿಯ ಭಿನ್ನಮತವನ್ನ ಮಾಜಿ ಸಿಎಂ ಯಡಿಯೂರಪ್ಪ ಬಹುತೇಕ

ಶಮನ ಮಾಡಿದ್ದಾರೆ. ಆಂತರಿಕವಾಗಿ ವಿರೋಧ ಇದ್ದರು ಬಹಿರಂಗವಾಗಿ ಅದನ್ನ ತೋರ್ಪಡಿಸಿಕೊಳ್ಳದಂತೆ ಯಡಿಯೂರಪ್ಪ ಪ್ಯಾಚ್ ಅಪ್ ಮಾಡಿದ್ದಾರೆ. ಆದರೆ ತಮ್ಮ ಪುತ್ರ ರಾಘವೇಂದ್ರ ಪ್ರತಿನಿಧಿಸುವ ಶಿವಮೊಗ್ಗ ಕ್ಷೇತ್ರದ ಬಂಡಾಯವನ್ನ ಮಾತ್ರ ಅವರಿಂದ ಸಾಧ್ಯವಾಗಿಲ್ಲ.

ಯಡಿಯೂರಪ್ಪ ಅವರಿಂದ ಶಿವಮೊಗ್ಗ ಬಂಡಾಯ ಶಮನ ಸಾಧ್ಯವೂ ಇಲ್ಲ. ಬಿಜೆಪಿಯ ಅನೇಕ ನಾಯಕರು ಈಶ್ವರಪ್ಪ ಮನವೊಲಿಕೆಗೆ ಮುಂದಾದರು ಈಶ್ವರಪ್ಪ ಪಟ್ಟು ಸಡಿಲಿಸದೆ, ಅಪ್ಪ– ಮಕ್ಕಳ ವಿರುದ್ಧ ವಾಗ್ದಾಳಿ ನಡೆಸುತ್ತಲೇ ಇದ್ದಾರೆ.

ಈಶ್ವರಪ್ಪ ಅವರ ಬಂಡಾಯವನ್ನ ಶಮನ ಮಾಡಲು ಈಗ ಅಮಿತ್ ಷಾ ಎಂಟ್ರಿ ಕೊಟ್ಟಿದ್ದಾರೆ. ಈಶ್ವರಪ್ಪ ಅವರನ್ನು ದೆಹಲಿಗೆ ಕರೆಸಿಕೊಂಡು ಸಂಧಾನ ಮಾಡುವ ನಿರ್ಧಾರಕ್ಕೆ ಬಂದಿದ್ದಾರೆ. ಆ ಮೂಲಕ ಈಶ್ವರಪ್ಪ ಬೇಡಿಕೆಯನ್ನ ಈಡೇರಿಸುವ ಎಲ್ಲ ಸಾಧ್ಯತೆಗಳು ಇವೆ.

ಈಶ್ವರಪ್ಪ ಅವರಿಗೆ ಮೊದಲು ತಮ್ಮ ಪುತ್ರನಿಗೆ ಟಿಕೆಟ್ ಕೊಡಬೇಕು ಎನ್ನುವ ಬೇಡಿಕೆ ಇತ್ತು. ಈಗ ವಿಜಯೇಂದ್ರನನ್ನು ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನದಿಂದ ಕೆಳಗಿಳಿಸಬೇಕು ಎನ್ನುವ ಷರತ್ತು ವಿಧಿಸಿದ್ದಾರೆ.

ಈಶ್ವರಪ್ಪ ಅವರ ಹೊಸ ಷರತ್ತು ಗಮನಿಸಿದ ಹೈಕಮಾಂಡ್, ತಕ್ಷಣ ಅದಕ್ಕೆ ಅನುಮೋದನೆ ಕೊಡುತ್ತಾರೆ. ಚುನಾವಣೆ ಮುಗಿದ ತಕ್ಷಣವೇ ವಿಜಯೇಂದ್ರ ಅಧಿಕಾರದಿಂದ ಕೆಳಗಿಳಿಯಲಿದ್ದಾರೆ ಎನ್ನುವ ಭರವಸೆ ನೀಡಿ ಚುನಾವಣಾ ಕಣದಿಂದ ಈಶ್ವರಪ್ಪ ಅವರನ್ನ ಪಕ್ಕಕ್ಕೆ ಸರಿಸುವುದು ನಿಶ್ಚಯವಾಗಿದೆ.

ಚುನಾವಣೆ ಮುಗಿದ ನಂತರ ಏನೆಲ್ಲಾ ಬೆಳವಣಿಗೆಗಳು ಆಗಬಹುದು ಎನ್ನುವುದು ಯಾರಿಗೆ ಗೊತ್ತು. ಒಂದೊ ಈಶ್ವರಪ್ಪ ಹೇಳಿದಂತೆ ರಾಜ್ಯಾಧ್ಯಕ್ಷರ ಬದಲಾವಣೆ ಆಗಬಹುದು, ಇಲ್ಲವೇ ಜಗದೀಶ್ ಶೆಟ್ಟರ್‌ಗೆ ಆದ ಸ್ಥಿತಿಯೇ ಈಶ್ವರಪ್ಪ ಅವರಿಗೂ ಬರಬಹುದು. ಒಟ್ಟಾರೆ ಕುರುಬ ಸಮುದಾಯದ ನಾಯಕನಿಗೆ ಬಲಿ ಕೊಡಲು ಬಿಜೆಪಿ ಮಾಸ್ಟರ್ ಪ್ಲಾನ್ ಮಾಡಿದಂತಿದೆ.

## ಹುಬ್ಬಳ್ಳಿ ಧಾರವಾಡ ಪೊಲೀಸ್ ಆಯುಕ್ತಾಲಯದಿಂದ ಪೊಲೀಸ್ ಧ್ವಜ ದಿನಾಚರಣೆ

# ಸಿಬ್ಬಂದಿಗಳು ಆರೋಗ್ಯದೆಡೆ ಗಮನ ಹರಿಸಿ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವೀರ, ಧೀರ, ನಿಸ್ವಾರ್ಥ ಸೇವೆ ಹಾಗೂ ಕರ್ತವ್ಯ ನಿಷ್ಠೆ ತೋರಿದ ಪೊಲೀಸ್ ಸಿಬ್ಬಂದಿಗಳನ್ನು ನೆನೆಯುವ ನಿಟ್ಟಿನಲ್ಲಿ ಪ್ರತಿ ವರ್ಷ ಏಪ್ರಿಲ್ 2ರಂದು ಪೊಲೀಸ್ ಧ್ವಜ ದಿನಾಚರಣೆಯನ್ನು ಆಚರಿಸಲಾಗುತ್ತದೆ. ನಿವೃತ್ತ ಪೊಲೀಸ್ ಅಧಿಕಾರಿಗಳನ್ನು ಸನ್ಮಾನಿಸಿ ಗೌರವಿಸುವ ಉದ್ದೇಶದಿಂದ ಈ ದಿನವನ್ನು ಆಚರಣೆ ಮಾಡಲಾಗುವುದು. ಬೇರೆ ಬೇರೆ ಇಲಾಖೆಗಳಿಗೆ ಹೋಲಿಸಿದರೆ ಪೊಲೀಸ್ ಇಲಾಖೆ ಅತ್ಯಂತ ಶಿಸ್ತಿನ ಇಲಾಖೆಯಾಗಿದೆ. ಸಮಾಜದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವುದರಲ್ಲಿ ಪೊಲೀಸರು ಪ್ರಮುಖ ಪಾತ್ರ ವಹಿಸಿರುತ್ತಾರೆ ಎಂದು ನಿವೃತ್ತ ಪೊಲೀಸ್ ಸಬ್ ಇನ್ಸಪೆಕ್ಟರ್ ಎಸ್.ಎಲ್. ಕಸ್ತೂರಿ ಹೇಳಿದರು.

ಮಂಗಳವಾರ ಗೋಕುಲ ರಸ್ತೆಯ ಹೊಸ ಸಶಸ್ತ್ರ ಮೀಸಲು ಪಡೆಯ ಕವಾಯತು ಮೈದಾನದಲ್ಲಿ ಹುಬ್ಬಳ್ಳಿ–ಧಾರವಾಡ ಪೊಲೀಸ್ ಆಯುಕ್ತಾಲಯದಿಂದ ಹಮ್ಮಿಕೊಳ್ಳಲಾಗಿದ್ದ ಪೊಲೀಸ್ ಧ್ವಜ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹುಬ್ಬಳ್ಳಿ–ಧಾರವಾಡ ಪೊಲೀಸ್ ಆಯುಕ್ತರಾದ ರೇಣುಕಾ ಸುಕುಮಾರ್ ಮಾತನಾಡಿ, ಕಳೆದ ಬಾರಿ 33 ಲಕ್ಷ 50 ಸಾವಿರ ಮೌಲ್ಯದ ಪೊಲೀಸ್ ಧ್ವಜಗಳನ್ನು ಹಂಚಿಕೆ ಮಾಡಲಾಗಿದ್ದು, ಈ ಸಾರಿ ಹೆಚ್ಚಿನ ಮೊತ್ತದ ಹಣ ಸಂಗ್ರಹಣೆಗೆ ಅಧಿಕಾರಿಗಳು ಮುತುವರ್ಜಿ



ವಹಿಸಬೇಕು. 2023–24ರಲ್ಲಿ ಪೊಲೀಸರ ಮಕ್ಕಳ ಎಸ್.ಎಸ್.ಎಲ್.ಸಿ ಹಾಗೂ ನಂತರದ ಶೈಕ್ಷಣಿಕ ವಿದ್ಯಾಭ್ಯಾಸಕ್ಕಾಗಿ ರೂ. 15 ಲಕ್ಷ 7 ಸಾವಿರ ಮೊತ್ತದ ಶೈಕ್ಷಣಿಕ ಸಹಾಯ ಧನವನ್ನು ಒದಗಿಸಲಾಗಿದೆ. ಸೇವೆಯಿಂದ ವಯೋನಿವೃತ್ತಿ ಹೊಂದಿದ 42 ಸಿಬ್ಬಂದಿಗಳಿಗೆ ತಲಾ 5 ಸಾವಿರ ವೆಚ್ಚದಲ್ಲಿ ಬಿಳ್ಕೊಡುಗೆ ಸಮಾರಂಭವನ್ನು ಏರ್ಪಡಿಸಿ ಆತ್ಮೀಯವಾಗಿ ಸನ್ಮಾನಿಸಲಾಗಿದೆ ಎಂದರು.

ಮಾರುತಿ ಹೆಗಡೆ ಅವರ ನೇತೃತ್ವದಲ್ಲಿ ವಿವಿಧ ಪಡೆಗಳು ಆಕರ್ಷಕ ಪಥ ಸಂಚಲನ ನಡೆಸಿದವು. ಡಿಸಿಪಿಗಳಾದ ಯಲ್ಲಪ್ಪ ಕಾಶಪ್ಪನವರ, ಎಸಿಪಿಗಳಾದ ಆರ್.ಕೆ. ಪಾಟೀಲ, ವಿಜಯಕುಮಾರ ತಳವಾರ, ನಿವೃತ್ತ ಡಿಐಜಿಪಿ ರವಿಕುಮಾರ ನಾಯಕ, ನಿವೃತ್ತ ಡಿಸಿಪಿ ಎಚ್.ಎ. ದೇವರಹೊರು, ನಿವೃತ್ತ ಡಿಎಸ್‌ಪಿಗಳಾದ ಆರ್.ಐ. ಅಂಗಡಿ, ಪ್ರಭುದೇವ ಮಾನೆ, ಶಿವಶಂಕರ ಗಡಾದಿ, ವಿ.ಬಿ. ಬೆಳವಡಿ, ನಿವೃತ್ತ ಪಿಐ ಅರುಣಕುಮಾರ ಸಾಳುಂಕೆ, ನಿವೃತ್ತ ಪಿಎಸ್‌ಐ ಆರ್.ಬಿ. ನೀರಲಗಿ, ಎಸ್.ಎನ್. ಬಾಳಿಕಾಯಿ, ವಿ.ಎಸ್. ಅಂಗಡಿ, ಹುಬ್ಬಳ್ಳಿ–ಧಾರವಾಡ ನಗರದ ನಿವೃತ್ತ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ, ಟ್ರಾಫಿಕ್ ವಾರ್ಡನ್, ಕುಟುಂಬಸ್ಥರು ಸೇರಿದಂತೆ ಇತರರು ಪಾಲ್ಗೊಂಡಿದ್ದರು.

ಹುಬ್ಬಳ್ಳಿ–ಧಾರವಾಡ ನಗರ ಕಾನೂನು ಮತ್ತು ಸುವ್ಯವಸ್ಥೆ ಉಪ ಪೊಲೀಸ ಆಯುಕ್ತರಾದ ರಾಜೀವ ಎಂ.ಸ್ವಾಗತಿಸಿದರು. ಪೊಲೀಸ್ ಇನ್ಸಪೆಕ್ಟರ್ ಮಾರುತಿ ಗುಳ್ಳಾರಿ ನಿರೂಪಿಸಿದರು. ಹುಬ್ಬಳ್ಳಿ–ಧಾರವಾಡ ನಗರ ಅಪರಾಧ ಮತ್ತು ಸಂಚಾರ ಉಪ ಪೊಲೀಸ ಆಯುಕ್ತರಾದ ರವೀಶ ಸಿ.ಆರ್. ವಂದಿಸಿದರು.

> ಪೊಲೀಸ್ ಇಲಾಖೆಯ ಉನ್ನತ ಅಧಿಕಾರಿಗಳ ಸಹಕಾರ ಹಾಗೂ ಮಾರ್ಗದರ್ಶನದಿಂದ ಉತ್ತಮ ಸೇವೆ ಸಲ್ಲಿಸಬಹುದಾಗಿದೆ. ನಾವು ನಮ್ಮ ಕರ್ತವ್ಯದ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳಬೇಕು. ಸಾರ್ವಜನಿಕರೊಂದಿಗೆ ಜನಸ್ನೇಹಿ ಪೊಲೀಸರಾಗಿ ಕರ್ತವ್ಯ ನಿರ್ವಹಿಸುವುದು ಹೆಮ್ಮೆಯ ವಿಷಯವಾಗಿದೆ. ಇಂತಹ ಇಲಾಖೆಯಲ್ಲಿ ದಿನದ 24 ಗಂಟೆಗಳ ಕಾಲ ಒತ್ತಡದಲ್ಲಿ ಸೇವೆ ಸಲ್ಲಿಸುತ್ತಿರುತ್ತೇವೆ. ಹೀಗಾಗಿ ನಮ್ಮ ಆರೋಗ್ಯದ ಕಡೆಗೆ ಹೆಚ್ಚಿನ ಗಮನ ಹರಿಸುವುದು ಸೂಕ್ತ ಎಂದು ಎಸ್.ಎಲ್. ಕಸ್ತೂರಿ ಅಭಿಪ್ರಾಯಪಟ್ಟರು.

# ನವೋದಯ ಶಾಲೆಗೆ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ



ಪಟ್ಟಣದ ಸಮೀಪದ ಚಿಂಚಲಿ ಗ್ರಾಮದ ಪಿ.ಎಂ.ಶ್ರೀ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿನಿ ಸೃಷ್ಟಿ ಮಾಹಾದೇವಪ್ಪ ಶಿದ್ರಾಮಣ್ಣವರ 2023–24ನೇ ಸಾಲಿನ ನವೋದಯ ಪರಿಕ್ಷೆಯಲ್ಲಿ ಉತ್ತೀರ್ಣರಾಗಿ ಆಯ್ಕೆಯಾಗಿದ್ದು, ಶಾಲಾ ಪ್ರಧಾನ ಗುರುಗಳು, ಶಿಕ್ಷಕರ ವೃಂದ ಹಾಗೂ ಎಸ್‌ಡಿಎಂಸಿ ಸರ್ವ ಸದಸ್ಯರು ಅಭಿನಂದಿಸಿದ್ದಾರೆ.

# ಅಸಮರ್ಪಕ ನೀರು ಪೂರೈಕೆಗೆ ಹೊಣೆ ಯಾರು?

■ ವಿಜಯಸಾಕ್ಷಿ ಸುದ್ದಿ, ಗದಗ



ಗದಗ ನಗರಕ್ಕೆ ಕುಡಿಯುವ ನೀರು ಪೂರೈಕೆಯಾಗದೇ ಈಗಾಗಲೇ 10 ದಿನಗಳು ಕಳೆದಿವೆ. ಇನ್ನು ನೀರು ಪೂರೈಕೆಗೆ ಕನಿಷ್ಠ ಎಂಟು ದಿನ ಕಾಯಬೇಕೆಂದು ನಗರಸಭೆ ಸಿಬ್ಬಂದಿಗಳಿಂದ ಮಾಹಿತಿ ದೊರೆತಿದೆ. ಗದಗ ನಗರದಲ್ಲಿ 45 ವರ್ಷಗಳ ಕಾಲ ಕಾಂಗ್ರೆಸ್ ಶಾಸಕರು ಆಡಳಿತ ನಡೆಸಿ, ಸಮರ್ಪಕವಾಗಿ ಕುಡಿಯುವ ನೀರು ಕೊಡಲು ಸಾಧ್ಯವಾಗದೇ ಇರುವುದು ಶೋಚನೀಯ ಎಂದು ಜೆಡಿಎಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ

ಹಾಜಿ ಅಲಿ ಹೆಚ್.ಕೊಪ್ಪಳ ಖೇದ ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಗದಗ ನಗರಕ್ಕೆ ನೀರು ಪಡೆದುಕೊಳ್ಳುವ ನದಿಯಲ್ಲಿ ಪೂರ್ಣ ಪ್ರಮಾಣದ ನೀರು ಬತ್ತಿ ಹೋಗುವ ಪೂರ್ವದಲ್ಲಿಯೇ ನೀರು ಪೂರೈಕೆಯಾಗದಿರುವುದಕ್ಕೆ ಯಾರು ಹೊಣೆಗಾರರು ಎಂಬುದು ಅರ್ಥವಾಗುತ್ತಿಲ್ಲ. ಇಂತಹ ಜನಪ್ರತಿನಿಧಿಗಳ ಮಧ್ಯದಲ್ಲಿ ಮತ್ತೆ ನಾವು ಜೈಕಾರ ಹಾಕುವುದು ನಮ್ಮೆಲ್ಲರ ಅದೃಷ್ಟವೇ ಸರಿ ಎಂದು ವ್ಯಂಗ್ಯವಾಡಿದ್ದಾರೆ.

# ಚುನಾವಣಾ ಕಾರ್ಯಗಳಿಗೆ ಮಕ್ಕಳ ಬಳಕೆ ನಿಷೇಧ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಲೋಕಸಭಾ ಚುನಾವಣೆಯಲ್ಲಿ ಚುನಾವಣಾ ಕಾರ್ಯಗಳಿಗೆ 18 ವರ್ಷದೊಳಗಿನ ಮಕ್ಕಳನ್ನು ಬಳಸಿಕೊಳ್ಳುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ನಿಷೇಧ ಮತ್ತು ನಿಯಂತ್ರಣ ಕಾಯ್ದೆ 1986ರನ್ವಯ ಯಾವುದೇ ಉದ್ಯೋಗ ಮತ್ತು ಪ್ರಕ್ರಿಯೆಗಳಲ್ಲಿ 14 ವರ್ಷಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಲೋಕಸಭಾ ಚುನಾವಣಾ ಪ್ರಚಾರದ ಸಮಯದಲ್ಲಿ ವಿವಿಧ



ರಾಜಕೀಯ ಪಕ್ಷಗಳು ಬಹು ವಿವಿಧ ಚಟುವಟಿಕೆಗಳಲ್ಲಿ 18 ವರ್ಷ ಪೂರ್ವದ ಮಕ್ಕಳನ್ನು ತೊಡಗಿಸಿಕೊಳ್ಳುವುದನ್ನು ನಿಷೇಧಿಸಲಾಗಿದೆ. ಅಂದರೆ ಮಕ್ಕಳನ್ನು ಯಾವುದೇ ಚುಣಾವಣಾ ಪ್ರಚಾರದಲ್ಲಿ ಬಳಸದಂತೆ ಕರಪತ್ರ ಹಾಗೂ ಪೋಸ್ಟರ್ ಹಂಚಲು ಅಥವಾ ಘೋಷಣೆ ಕೂಗುವುದು, ಚುನಾವಣಾ ಸಭೆ, ಹೋಲ್ಡಿಂಗ್ ಕಟ್ಟುವುದು, ಪ್ರಚಾರ ವಾಹನದ ಮೇಲೆ ಮಕ್ಕಳನ್ನು ಕೂರಿಸುವುದು, ಒಟ್ಟಾರೆಯಾಗಿ ಪ್ರಚಾರ ಸಭೆಗಳಲ್ಲಿ ಮಕ್ಕಳನ್ನು ಬಳಸದಂತೆ ನಿರ್ದೇಶಿಸಲಾಗಿದೆ.

ಲೋಕಸಭಾ ಸಾರ್ವತ್ರಿಕ ಚುನಾವಣೆ 2024ಕ್ಕೆ ಯಾವುದೇ ಪಕ್ಷಗಳು ಚುನಾವಣಾ ಮತ್ತು ಪ್ರಚಾರ ಕಾರ್ಯಗಳಲ್ಲಿ 18 ವರ್ಷದೊಳಗಿನ ಮಕ್ಕಳನ್ನು ಬಳಸಿಕೊಳ್ಳದಂತೆ ಕ್ರಮವಹಿಸಲು ಹಾಗೂ ಉಲ್ಲಂಘನೆ ಕಂಡು ಬಂದಲ್ಲಿ ಕಾಯ್ದೆಯ ಕಲಂಗಳ ಅನ್ವಯ ಅಗತ್ಯ ಸೂಕ್ತ ಕ್ರಮ ಕೈಗೊಳ್ಳುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಿಳೆಯರು ಸ್ವಾವಲಂಬನೆಯ ಜೀವನ ನಡೆಸಿ




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರತಿಯೊಂದು ಉದ್ಯೋಗಕ್ಕೂ ತರಬೇತಿ ಅವಶ್ಯವಾಗಿದ್ದು, ಮಹಿಳೆಯರು ಸ್ವಾವಲಂಬನೆಯ ಜೀವನ ನಡೆಸಲು ಹೊಲಿಗೆ, ಎಂಬ್ರಾಯಿಡರಿ ತರಬೇತಿ ಸಹಕಾರಿಯಾಗಲಿದೆ ಎಂದು ಬೆಂಗಳೂರಿನ ಹಿಂದೂ ಸೇವಾ ಪ್ರತಿಷ್ಠಾನದ ನಿರ್ದೇಶಕ ಸುರೇಶ ಜಿ. ಹಾಗೂ ಡಾ.ಪ್ರಕಾಶ್ ಹೊಸಮನಿ ಅಭಿಪ್ರಾಯಪಟ್ಟರು.

ಅವರು ಹಿಂದು ಸೇವಾ ಪ್ರತಿಷ್ಠಾನ, ಸೇವಾ ಮಿತ್ರ ಯೋಜನೆ ಲಕ್ಷ್ಮೇಶ್ವರ ವತಿಯಿಂದ ಪಟ್ಟಣದ ಅಂಬಾಭವಾನಿ ದೇವಸ್ಥಾನದ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಹಿಳಾ ಸ್ವಾವಲಂಬನೆಗಾಗಿ ಹೊಲಿಗೆ ಮತ್ತು ಎಂಬ್ರಾಯಡರಿ ತರಬೇತಿ ಪಡೆದ ಮಹಿಳೆಯರಿಗೆ ಪ್ರಮಾಣಪತ್ರ ವಿತರಿಸಿ ಮಾತನಾಡಿದರು.

ಕೆಲಸದ ಮಹತ್ವವನ್ನು ಅರಿತು, ತರಬೇತಿ ಪಡೆದುಕೊಂಡು ವೃತ್ತಿಯಲ್ಲಿ ನೈಪುಣ್ಯತೆಯನ್ನು ಸಾಧಿಸಿ, ಸ್ವಾವಲಂಬನೆಯಿಂದ ಜೀವನ ಸಾಗಿಸಬೇಕು ಎಂದರು. ಹಿಂದೂ ಸನಾತನ ಸಂಸ್ಥೆಯ ವಿದುಲಾ ಹಳದಿಪುರ ಮಾತನಾಡಿ, ಮಹಿಳೆಯರು ವೃತ್ತಿ ಜೀವನದಲ್ಲಿ ಸ್ವ–ಉದ್ಯೋಗದೊಂದಿಗೆ ಸಮಾಜದ ಮುಖ್ಯವಾಹಿನಿಗೆ ಬರುವದು ಅವಶ್ಯವಾಗಿದೆ. ಮಹಿಳೆಯರಿಗೆ ಹಲವು ರೀತಿಯ ಸಾಲ ಸೌಲಭ್ಯಗಳು ಹಾಗೂ ಕೌಶಲ್ಯ ಯೋಜನೆಗಳಿದ್ದು, ಅದನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಕರೆ ನೀಡಿದರು.

ತರಬೇತಿ ಪಡೆದ 134 ಮಹಿಳೆಯರಿಗೆ ಪ್ರಮಾಣಪತ್ರವನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ತಾಲೂಕು ಸಂಯೋಜಕ ಶಿವಲಿಂಗ ಆಡರಕಟ್ಟಿ, ಚೇತನ್ ಯಲಿಗಾರ, ಶಿವಶಂಕರ ಬ್ಯಾಡಗಿ, ಬಸವರಾಜ್ ಗೋಡಿ, ಪೂಜಾ ಮಾಮನಿ, ಚಂದ್ರು ಕುಂದಗೋಳ ಸೇರಿದಂತೆ ನೂರಾರು ಮಹಿಳೆಯರು ಇದ್ದರು.

# ಗುರುಬಸವ ಶಾಲೆಯಲ್ಲಿ ಪದವಿ ಪ್ರದಾನ




■ ವಿಜಯಸಾಕ್ಷಿ ಸುದ್ದಿ, ಗದಗ

ತೋಂಟದಾರ್ಯ ವಿದ್ಯಾಪೀಠದ ಗುರುಬಸವ ಶಾಲೆಯಲ್ಲಿ 2023–24ನೇ ಸಾಲಿನ ಗಏಉ ಮಕ್ಕಳಿಗೆ ಪದವಿ ಪ್ರದಾನ ಸಮಾರಂಭ ನಡೆಯಿತು. ಗುರುಬಸವ ಸಿ.ಬಿ.ಎಸ್.ಇ. ಶಾಲೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ತೋಂಟದಾರ್ಯ ವಿದ್ಯಾಪೀಠದ ಅಇಔ ಆಯ್.ಬಿ. ಬೆನಕೊಪ್ಪ ಮಕ್ಕಳಿಗೆ ಪದವಿ ಪ್ರದಾನ ಮಾಡಿದರು.


ಗುರುಬಸವ ಸಿ.ಬಿ.ಎಸ್.ಇ. ಶಾಲೆಯಲ್ಲಿ ಇಂಥ ವಿನೂತನ ಕಾರ್ಯಕ್ರಮ ನೋಡಿ ಪಾಲಕರು ಪ್ರಶಂಸೆ ವ್ಯಕ್ತಪಡಿಸಿದರು. ಮುಖ್ಯ ಅತಿಥಿಗಳಾಗಿ ಗುರುಬಸವ ಶಾಲೆಯ ಉಪಪ್ರಾಚಾರ್ಯರಾದ ಮಶುಭಾಂಗಿನಿ ಹೆಚ್., ಅನಲಾ ಎಸ್. ಉಪಸ್ಥಿತರಿದ್ದರು. ಅನಿತಾ ಪಾಲಿವಾಲ್ ಕಾರ್ಯಕ್ರಮ ನಿರೂಪಿಸಿದರು. ದೀಪಾ ನಾಯರ್ ಸ್ವಾಗತಿಸಿದರು. ಸಾರಾ ಸಂಯೋಜಿಸಿದರು. ಶಿಲ್ಪಾ ಮತ್ತು ಪ್ರಿಯಾಂಕ ಅವರು ಸಹಕಾರ ನೀಡಿದರು.



■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾ ಚುನಾವಣಾಧಿಕಾರಿಗಳಾದ ದಿವ್ಯ ಪ್ರಭು ಅವರು ಮಂಗಳವಾರ ಮಧ್ಯಾಹ್ನ ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ ಸ್ಥಾಪಿಸಲಿರುವ, ಧಾರವಾಡ ಲೋಕಸಭಾ ಸಾರ್ವತ್ರಿಕ ಚುನಾವಣೆಯ ಮತ ಎಣಿಕಾ ಕೇಂದ್ರದ ಸಿದ್ಧತೆಯನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಬಿ.ಆರ್.ಟಿ.ಎಸ್. ವ್ಯವಸ್ಥಾಪಕ ನಿರ್ದೇಶಕ ಶಿವಾನಂದ ಭಜಂತ್ರಿ, ಎಸಿ ಶಾಲಂ ಹುಸೇನ್, ತಹಸೀಲ್ದಾರ ಡಾ. ಡಿ.ಎಚ್. ಹೂಗಾರ ಸೇರಿದಂತೆ ಇತರ ಅಧಿಕಾರಿಗಳು ಇದ್ದರು.

# ಮೈಸೂರು: ಬಳ್ಳೆ ಶಿಬಿರದ ಸಾಕಾನೆ ಕುಮಾರಸ್ವಾಮಿ ಸಾವು; ಕಾಡಿನಲ್ಲಿ ಕಳೇಬರ ಪತ್ತೆ



■ ವಿಜಯಸಾಕ್ಷಿ ಸುದ್ದಿ, ಮೈಸೂರು

: ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ಡಿ.ಬಿ.ಕುಪ್ಪೆ ವಲಯದ ಬಳ್ಳೆ ಸಾಕಾನೆ ಶಿಬಿರದಲ್ಲಿದ್ದ 46 ವಯಸ್ಸಿನ ಕುಮಾರಸ್ವಾಮಿ ಮೃತಪಟ್ಟಿದ್ದು, ಕಾಡಿನ ಒಳಭಾಗದಲ್ಲಿ ಕಳೇಬರ ಪತ್ತೆಯಾಗಿದೆ.

ಕುಮಾರಸ್ವಾಮಿ ಕೆಲವು ದಿನಗಳಿಂದ ಅನಾರೋಗ್ಯ ಸಮಸ್ಯೆಯಿಂದ ಬಳಲುತ್ತಿತ್ತು. ಆಹಾರಕ್ಕಾಗಿ ನಿತ್ಯವೂ ಅರಣ್ಯಕ್ಕೆ ಬಿಡಲಾಗುತ್ತಿತ್ತು. ಈ ಮಧ್ಯೆ ಇತ್ತೀಚೆಗೆ ಕುಮಾರಸ್ವಾಮಿ ಕಾಡಿನಲ್ಲಿ ನಾಪತ್ತೆಯಾಗಿದೆ. ಇತ್ತ ಶಿಬಿರಕ್ಕೆ ಬಾರದ ಆನೆಗಾಗಿ ಅರಣ್ಯ ಇಲಾಖೆ ಸಿಬ್ಬಂದಿ ಪ್ರತೀದಿನ ಕೂಂಬಿಂಗ್ ಕಾರ್ಯಾಚರಣೆ ಮೂಲಕ ಹುಡುಕಾಟ ನಡೆಸುತ್ತಿದ್ದರು. ಈ ವೇಳೆ ಡಿ.ಬಿ.ಕುಪ್ಪೆ ವಲಯದ ಆನೆ ಕಲ್ಲು ದಿಬ್ಬದ ದಾರಿಯ ಅರಣ್ಯ ಪ್ರದೇಶದಲ್ಲಿ ಕಳೇಬರ ಪತ್ತೆಯಾಗಿದೆ.

2001ರಲ್ಲಿ ಸೆರೆ ಸಿಕ್ಕ ಕುಮಾರಸ್ವಾಮಿ ಆನೆಯನ್ನು ಕೂಂಬಿಂಗ್ ಮತ್ತು ಇತರೆ ಕಾರ್ಯಾಚರಣೆಗಳಿಗೆ ಬಳಸಿಕೊಳ್ಳಲಾಗುತ್ತಿತ್ತು ಎಂದು ನಾಗರಹೊಳೆಯ ಡಿಸಿಎಫ್ ಹರ್ಷಕುಮಾರ್ ಚಿಕ್ಕನರಗುಂದ ಮಾಹಿತಿ ನೀಡಿದರು.

ನಿಯಮಾವಳಿಗಳಂತೆ ಆನೆಯ ಮರಣೋತ್ತರ ಪರೀಕ್ಷೆ ನಡೆಸಲಾಗಿದೆ. ಹೊಟ್ಟೆ ಹಾಗೂ ಸಣ್ಣ ಕರುಳಿನಲ್ಲಿ ಸೋಂಕು ಉಂಟಾಗಿ ಮೃತಪಟ್ಟಿರುವುದಾಗಿ ಮುಖ್ಯ ಪಶುವೈದ್ಯಾಧಿಕಾರಿ ಡಾ.ಬಿ.ಬಿ.ಪ್ರಸನ್ನ ತಿಳಿಸಿದ್ದಾರೆ. ಮೇಟಿಕುಪ್ಪೆ ವನ್ಯಜೀವಿ ಉಪ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಕೆ.ಎನ್.ರಂಗಸ್ವಾಮಿ, ಡಿ.ಬಿ.ಕುಪ್ಪೆ ವನ್ಯಜೀವಿ ವಲಯದ ಎಸ್.ಡಿ.ಮಧು ಹಾಗು ಅಧಿಕಾರಿಗಳು ಹಾಜರಿದ್ದರು.

# ಕಡ್ಡಾಯ ಮತದಾನ ಜಾಗೃತಿ

■ ವಿಜಯಸಾಕ್ಷಿ ಸುದ್ದಿ, ನರಗುಂದ

ತಾಲೂಕಿನ ವಾಸನ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯ ಬದು ನಿರ್ಮಾಣ ಕಾಮಗಾರಿ ಸ್ಥಳದಲ್ಲಿ ಕಡ್ಡಾಯ ಮತದಾನ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ವಾಸನ ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಮಲ್ಲಪ್ಪ ವಾಲಿ ಮಾತನಾಡಿ, ಮೇ.7ರಂದು ಲೋಕಸಭಾ ಚುನಾವಣೆಯಲ್ಲಿ ಎಲ್ಲ ಕೂಲಿಕಾರರು ತಪ್ಪದೇ ಮತ ಚಲಾಯಿಸಬೇಕು. ಬೇಸಿಗೆ ಇದೆಯೆಂದು ಬೇರೆ ಊರಿಗೆ ಗುಳೆ ಹೋಗದೇ ಇದ್ದೂರಲ್ಲೇ ಉದ್ಯೋಗ ಖಾತ್ರಿ ಕೆಲಸ ಆರಂಭ ಮಾಡಲಾಗಿದೆ.



ನಿಮ್ಮೂರಲ್ಲೇ ಉದ್ಯೋಗ ಖಾತರಿ ಕೆಲಸ ಮಾಡಿ ಮೇ. 7ರಂದು ಮತ ಚಲಾಯಿಸಿ. ಸಂವಿಧಾನ ನೀಡಿದ ಹಕ್ಕನ್ನು ಮರೆಯದೇ ಕಡ್ಡಾಯವಾಗಿ ಚಲಾಯಿಸೋಣ ಎಂದರು.

ವಾಸನ ಗ್ರಾ.ಪಂ ಕಾರ್ಯದರ್ಶಿ ಸಿದ್ದಯ್ಯ ಮಣ್ಣೂರಮಠ 395 ಜನ ಕೂಲಿಕಾರರಿಗೆ ಮತದಾನ ಕುರಿತಾದ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು. ಈ ಸಂದರ್ಭದಲ್ಲಿ ನರೇಗಾ ಸಿಬ್ಬಂದಿ ವರ್ಗ ಹಾಗೂ ವಾಸನ ಗ್ರಾ.ಪಂ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ಕಾಂಗ್ರೆಸ್ ಮಹಿಳಾ ವಿರೋಧಿ ಪಕ್ಷ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದಲ್ಲಿ ಸಂವಿಧಾನ ವಿರೋಧಿ ಮತ್ತು ಮಹಿಳಾ ವಿರೋಧಿ ಕಾಂಗ್ರೆಸ್ ಸರಕಾರ ಆಡಳಿತ ನಡೆಸುತ್ತಿದೆ. ಕಾಂಗ್ರೆಸ್ ಸರಕಾರ ಬಂದಾಗಲೆಲ್ಲ ಇಂಥ ಮಹಿಳಾ ವಿರೋಧಿ ಧೋರಣೆಗಳು ಕಾಣಿಸುತ್ತವೆ. ಕಾಂಗ್ರೆಸ್ ಪಕ್ಷದ ಸಚಿವ ಪ್ರಿಯಾಂಕ್ ಖರ್ಗೆಯವರು ಹಿಂದೆಯೂ ಮಹಿಳೆಯರು ಸರಕಾರಿ ಕೆಲಸ ಪಡೆಯಲು ಮಂಚ ಹತ್ತಬೇಕು ಎಂದಿದ್ದರು. ಈ ಮೂಲಕ ಇಡೀ ಮಹಿಳಾ ಸಮುದಾಯಕ್ಕೆ ಅವಮಾನ ಮಾಡಿದ್ದರು. ಇದೀಗ ಮಹಿಳೆಯರ ತಾಳಿ, ಕಾಲುಂಗರ ತೆಗೆಸುವ ಕಾರ್ಯಕ್ಕೆ ಕೈಹಾಕಿದ್ದಾರೆ. ಇಂಥ ಅವಮಾನಕ್ಕೆ ಮಹಿಳೆಯರು ಭವಿಷ್ಯದಲ್ಲಿ ಕಾಂಗ್ರೆಸ್ ಪಕ್ಷವನ್ನು ತಿರಸ್ಕರಿಸಿ ಸಮರ್ಥ ಉತ್ತರ ಕೊಡಲಿದ್ದಾರೆ ಎಂದು ಮಹಿಳಾ ಮೋರ್ಚಾ ಬಿಜೆಪಿ ಜಿಲ್ಲಾಧ್ಯಕ್ಷೆ ನಿರ್ಮಲಾ ಕೊಳ್ಳಿ, ಜಯಶ್ರೀ ಉಗಲಾಟದ, ವಂದನಾ ವರ್ಣೇಕರ, ಅಶ್ವಿನಿ ಜಗತಾಪ್ ಅಭಿಪ್ರಾಯಪಟ್ಟಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಹಿಂದೂ ಧರ್ಮದ ಪ್ರಕಾರ ಮಹಿಳೆಯರಿಗೆ ಮಾಂಗಲ್ಯ ಮತ್ತು ಕಾಲುಂಗುರಗಳು ಅತ್ಯಂತ ಪವಿತ್ರವಾದವು. ಅವುಗಳನ್ನು ಸಾಮಾನ್ಯವಾಗಿ ಮಹಿಳೆಯರು ವೈಧವ್ಯ ಬಂದಾಗ ಮತ್ತು ಸಂಪೂರ್ಣ ದೇಹದ ಸ್ಕ್ಯಾನಿಂಗ್ ಸಂದರ್ಭದಲ್ಲಿ ಮಾತ್ರ ತೆ-ಗೆಯುತ್ತಾರೆ. ಪರೀಕ್ಷೆ ವೇಳೆ ಮಾಂಗಲ್ಯ ಮತ್ತು ಕಾಲುಂಗುರ ತೆಗೆಯುವಂತೆ ಮಾಡುವ ಮೂಲಕ ಭಾರತದ ನಾರಿಯರಿಗೆ ಅವಮಾನ ಮಾಡಿದ್ದಾರೆ. ಈ ಮೂಲಕ ಕಾಂಗ್ರೆಸ್ ಪಕ್ಷದ ಮಹಿಳಾ ವಿರೋಧಿ ಧೋರಣೆ ಮತ್ತೊಮ್ಮೆ ಅನಾವರಣಗೊಂಡಿದೆ ಎಂದು ಅವರು ತಿಳಿಸಿದ್ದಾರೆ.

## ಕವಲೇದುರ್ಗದ ಭುವನಗಿರಿ ಸಂಸ್ಥಾನ ಹಿರೇಮಠದಲ್ಲಿ ಧರ್ಮ ಜಾಗೃತಿ ಸಮಾರಂಭ


# ಧರ್ಮ ಬೆಳೆಸುವ ಜವಾಬ್ದಾರಿ ಮಠಗಳ ಮೇಲಿದೆ

■ ವಿಜಯಸಾಕ್ಷಿ ಸುದ್ದಿ, ರಿಪ್ಪನ್‌ಪೇಟೆ

ಎಲ್ಲರೂ ಅವರವರ ಧರ್ಮಕ್ಕೆ ಜಯವಾಗಲಿ ಎಂದರೆ, ಲಿಂ.ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳು ಮಾನವ ಧರ್ಮಕ್ಕೆ ಜಯವಾಗಲಿ, ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂಬ ಭಾವೈಕ್ಯ ಸಂದೇಶ ನೀಡಿ ಜಗದ್ವಂದ್ಯರಾಗಿದ್ದಾರೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಮಂಗಳವಾರ ಇಲ್ಲಿನ ಕವಲೇದುರ್ಗದ ಭುವನಗಿರಿ ಸಂಸ್ಥಾನ ಹಿರೇಮಠದಲ್ಲಿ ಜರುಗಿದ ಇಷ್ಟಲಿಂಗ ಮಹಾಪೂಜೆ, ಮಂಡಲ ಪೂಜೆಯ ಮುಕ್ತಾಯ, ನೂತನ ಕಟ್ಟಡ ಉದ್ಘಾಟನೆ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಜಾತಿ-ಮತ-ಪಂಥಗಳೆನ್ನದೆ ಸರ್ವ ಸಮುದಾಯದ ಅಭ್ಯುದಯಕ್ಕಾಗಿ ಶ್ರಮಿಸಿದ ಕೀರ್ತಿ ಶ್ರೀ ಜಗದ್ಗುರು ರೇಣುಕಾದಿ ಪಂಚಾಚಾರ್ಯರಿಗೆ



ಸಲ್ಲುತ್ತದೆ. ವಿಶ್ವ ಬಂಧುತ್ವದ ಆದರ್ಶ ಭಾವನೆಗಳನ್ನು ಹೊಂದಿ ಧರ್ಮ ಕಟ್ಟಿ ಬೆಳೆಸುವ ಜವಾಬ್ದಾರಿ ನಾಡಿನ ಮಠಗಳ ಮೇಲಿದೆ. ಉತ್ತಮ ಸಂಸ್ಕಾರ ಆದರ್ಶ ಚಿಂತನಗಳನ್ನು ಉಳಿಸಿ ಬೆಳೆಸಿದ್ದಾದರೆ ಆರೋಗ್ಯಪೂರ್ಣ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ. ಎಲ್ಲ ಧರ್ಮಗಳ ಗುರಿ ಮಾನವ ಕಲ್ಯಾಣವೇ ಆಗಿದೆ ಎಂಬುದನ್ನು ಅರಿಯದೇ ಇಂದು ಧರ್ಮ, ದೇವರ ಹೆಸರಿನಲ್ಲಿ ಏನೆಲ್ಲ ನಡೆಯುತ್ತಿವೆ.

ನೇತೃತ್ವ ವಹಿಸಿದ ಕವಲೇದುರ್ಗದ ಭುವನಗಿರಿ ಸಂಸ್ಥಾನ ಹಿರೇಮಠದ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಗುರುವಿನ ಅಂತಃಕರಣದ ಆಶೀರ್ವಾದದಿಂದ ಏನೆಲ್ಲ ಸಾಧಿಸಲು ಸಾಧ್ಯವಾಗುತ್ತದೆ. ಕೃಷಿ ಜೀವನ-ಋಷಿ ಜೀವನ ತತ್ವದಡಿಯಲ್ಲಿ ಇಲ್ಲಿನ ಗುರುಕುಲ ನಡೆಯುತ್ತಿದೆ. ಶ್ರೀ ರಂಭಾಪುರಿ ಜಗದ್ಗುರುಗಳ ಕೃಪಾಶೀರ್ವಾದದಿಂದ ಶ್ರೀ ಮಠ ಅಭಿವೃದ್ಧಿ ಹೊಂದುತ್ತದೆ. ಭವಿಷ್ಯತ್ತಿನ ದಿನಗಳಲ್ಲಿ ಶ್ರೀ ಮಠದಲ್ಲಿ ವಾರ್ಷಿಕ ಜಾತ್ರಾ ಮಹೋತ್ಸವ ನಡೆಸುವ ಸಂಕಲ್ಪ ತಮ್ಮದಾಗಿದೆ ಎಂದರು.

ಮಳಲಿಮಠದ ಡಾ.ನಾಗಭೂಷಣ ಶಿವಾಚಾರ್ಯ ಸ್ವಾಮಿಗಳು, ಕೊಣಂದೂರಿನ ಶ್ರೀಪತಿ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳು, ಹರಪನಹಳ್ಳಿ ವರಸದ್ಯೋಜಾತ ಶಿವಾಚಾರ್ಯ ಸ್ವಾಮಿಗಳು ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

ತೀರ್ಥಹಳ್ಳಿ ಶಾಸಕ ಆರಗ ಜ್ಞಾನೇಂದ್ರ, ಲತಾ-ಕೆ.ಆರ್. ಪ್ರಕಾಶ ದಂಪತಿಗಳು, ಹಾಲಪ್ಪಗೌಡರು, ಗುರುಮೂರ್ತಿ ನಾಯಕ, ಪಾಂಡಣ್ಣ, ರಾಘವೇಂದ್ರ, ವಿಘ್ನೇಶ್ವರ ಸೊಲ್ಲಾಪುರಮಠ, ಪ್ರಶಾಂತ ರಿಪ್ಪನ್‌ಪೇಟೆ, ಯುವರಾಜಗೌಡ, ಸಿ.ಎಚ್. ಬಾಳನಗೌಡ್ರ, ವರ್ತೇಶಗೌಡ್ರು, ಬಸವರಾಜ ರಿಪ್ಪನ್‌ಪೇಟೆ ಸೇರಿದಂತೆ ಅನೇಕ ಗಣ್ಯರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು. ಸಮಾರಂಭಕ್ಕೂ ಮುನ್ನ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜಾ ನೆರವೇರಿಸಿ ಭಕ್ತ ಸಂಕುಲಕ್ಕೆ ಶುಭ ಹಾರೈಸಿದರು

> ಮನುಷ್ಯನ ಬುದ್ಧಿಶಕ್ತಿ ಬೆಳೆದಂತೆ ಭಾವನೆಗಳು ಬೆಳೆಯುತ್ತಿಲ್ಲ ಎಂಬುದು ನೋವಿನ ಸಂಗತಿಯಾಗಿದೆ. ಪ್ರತಿಯೊಬ್ಬರಲ್ಲಿಯೂ ಸ್ವಾಭಿಮಾನದ ಜೊತೆಗೆ ದೇಶಾಭಿಮಾನ ಬೆಳೆದು ಬರಬೇಕು. ಕವಲೇದುರ್ಗದ ಮರುಳಸಿದ್ಧ ಶಿವಾಚಾರ್ಯ ಸ್ವಾಮಿಗಳು ಶ್ರೀ ಮಠದ ಅಧಿಕಾರ ವಹಿಸಿಕೊಂಡ ನಂತರ ಸತ್ಯ ಸಂಕಲ್ಪದೊಂದಿಗೆ ಅನೇಕ ಅಭಿವೃದ್ಧಿ ಕಾರ್ಯಗಳನ್ನು ಮಾಡುತ್ತಿದ್ದಾರೆ. ನಾಡಿನ ಮಠಗಳಿಗೆ ಬೇಕಾಗುವ ಭಾವೀ ಮಠಾಧೀಶರಿಗೆ, ಜನ ಮನಕ್ಕೆ ಹತ್ತಿರವಾಗಿ ಕಾರ್ಯ ನಿರ್ವಹಿಸುವ ಶಾಸ್ತ್ರಿ ಬಳಗಕ್ಕೆ ತಮ್ಮ ಗುರುಕುಲದ ಮೂಲಕ ಶಿಕ್ಷಣ ನೀಡುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಕವಲೇದುರ್ಗ ಭುವನಗಿರಿ ಸಂಸ್ಥಾನ ಮಠ ಉತ್ತುಂಗಕ್ಕೆ ಏರುವುದರಲ್ಲಿ ಸಂಶಯವಿಲ್ಲ.
>
> **– ಶ್ರೀ ಡಾ. ವೀರಸೋಮೇಶ್ವರ ಜಗದ್ಗುರುಗಳು.**
> ಶ್ರೀ ರಂಭಾಪುರೀ ಪೀಠ, ಬಾಳೆಹೊನ್ನೂರು.

## ಮಾರನಬಸರಿಯಲ್ಲಿ ಚುನಾವಣಾ ಪ್ರಚಾರ ಕೈಗೊಂಡ ಬಸವರಾಜ ಬೊಮ್ಮಾಯಿ

# ಎರಡೂ ಜಿಲ್ಲೆಗಳು ನನಗೆ ಹೊಸದಲ್ಲ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ತಾವು ಹಾವೇರಿ-ಗದಗ ಲೋಕಸಭಾ ಕ್ಷೇತ್ರದಲ್ಲಿ ಆಯ್ಕೆಯಾಗಿ ಬಂದ ತಕ್ಷಣ ಯಲವಿಗಿ-ಕುಷ್ಟಗಿ ರೈಲು ಸಂಪರ್ಕಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಬಿಜೆಪಿ ಅಭ್ಯರ್ಥಿ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದರು.

ಸೋಮವಾರ ನರೇಗಲ್ಲ ಹೋಬಳಿಯ ಮಾರನಬಸರಿ ಗ್ರಾಮಕ್ಕೆ ಚುನಾವಣಾ ಪ್ರಚಾರಾರ್ಥ ಆಗಮಿಸಿದ್ದ ಸಂದರ್ಭದಲ್ಲಿ ಚಂದ್ರಕಾಂತ ಮಾರನಬಸರಿಯವರ ಮನೆಯಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಯಲವಿಗಿ-ಗದಗ ರೈಲು ಮಾರ್ಗಕ್ಕೆ ಈಗಾಗಲೇ ಕೇಂದ್ರದಿಂದ ಹಸಿರು ನಿಶಾನೆ ದೊರಕಿದೆ. ಇದೇ ಯೋಜನೆಯನ್ನು ಕುಷ್ಟಗಿಯವರೆಗೆ ಬೆಳೆಸಿದರೆ ನರೇಗಲ್ಲ, ಗಜೇಂದ್ರಗಡ, ಹನುಮಸಾಗರ ಭಾಗದ ಜನತೆಗೂ



ಅನುಕೂಲವಾಗುತ್ತದೆ ಎಂದರು.


ಈ ಎರಡೂ ಜಿಲ್ಲೆಗಳು ನನಗೆ ಹೊಸದಲ್ಲ. ಕಳೆದ 20-25 ವರ್ಷಗಳಿಂದ ಈ ಎರಡೂ ಜಿಲ್ಲೆಗಳ ಜನರ, ಹಿರಿಯರ, ಧುರೀಣರ ಸಂಪರ್ಕ ನನಗಿದೆ. ಕಾರ್ಯಕರ್ತರೂ ಸಹ ನನ್ನ ಜೊತೆಗಿದ್ದು, ಕಾರ್ಯ ನಿರ್ವಹಿಸಲು ಸಾಕಷ್ಟು ತಯಾರಿ ಮಾಡಿಕೊಂಡಿದ್ದಾರೆ. ಹೀಗಾಗಿ ಈ ಕ್ಷೇತ್ರದಲ್ಲಿ ಗೆಲುವು ನನ್ನದೇ ಎಂದು ಬೊಮ್ಮಾಯಿ ವಿಶ್ವಾಸ ವ್ಯಕ್ತಪಡಿಸಿದರು.

ರೈತರ ಬೆಳೆಗೆ ಉತ್ತಮ ಬೆಲೆ ದೊರಕಬೇಕು, ಸೂಕ್ತ ಮಾರುಕಟ್ಟೆ ದೊರಕಬೇಕೆನ್ನುವ ಹಿನ್ನೆಲೆಯಲ್ಲಿ ಫುಡ್‌ಪಾರ್ಕ್ ಮಾಡಬೇಕೆನ್ನುವ ಕನಸಿದೆ. ಅದಕ್ಕೆ ಬೇಕಾಗುವ ಜಾಗೆ ಎಲ್ಲಿ ದೊರಕುತ್ತದೆಯೋ ಅಲ್ಲಿ ಅದನ್ನು ನಿರ್ಮಿಸುವ ಕನಸಿದೆ. ರೈತರ ಬೆಳೆಗಳಿಗೆ ಗರಿಷ್ಠ ಬೆಲೆ ದೊರಕುವಂತೆ ಮಾಡುವುದೂ ಸಹ ನನ್ನ ಬಹು ದಿನಗಳ ಕನಸಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಮಾಜಿ ಸಚಿವ ಕಳಕಪ್ಪ ಬಂಡಿ, ಧುರೀಣ ರವಿ ದಂಡಿನ, ಮುಖಂಡ ಮುತ್ತಣ್ಣ ಕಡಗದ, ಅಶೋಕ ನವಲಗುಂದ, ಜೆಡಿಎಸ್ ಜಿಲ್ಲಾಧ್ಯಕ್ಷ ಎಂ.ವೈ. ಮುಧೋಳ, ನ್ಯಾಯವಾದಿ ಬಿ.ಎಂ. ಸಜ್ಜನರ, ರವಿ ಬಿದರೂರ, ಬಸವರಾಜ ವಂಕಲಕುಂಟಿ, ಶಶಿಧರ ಸಂಕನಗೌಡ್ರ ಮುಂತಾದವರಿದ್ದರು.

> ಈ ಸಾರೆಯ ಚುನಾವಣೆ ಅತ್ಯಂತ ವೈಶಿಷ್ಟ್ಯಪೂರ್ಣ ಚುನಾವಣೆಯಾಗಿದ್ದು, ನಮ್ಮ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ಮೈತ್ರಿಯೊಂದಿಗೆ ಚುನಾವಣೆಯನ್ನು ಎದುರಿಸುತ್ತಿದ್ದೇವೆ. ನಮ್ಮ ಪಕ್ಷದ ಹಿರಿಯರು ಮತ್ತು ಜೆಡಿಎಸ್ ಪಕ್ಷದ ಹಿರಿಯರು ಒಟ್ಟಿಗೆ ಚುನಾವಣೆಯನ್ನು ಎದುರಿಸುತ್ತಿರುವದರಿಂದ ರಾಜ್ಯದ ಎಲ್ಲ ಲೋಕಸಭಾ ಕ್ಷೇತ್ರಗಳಲ್ಲಿಯೂ ಗೆಲ್ಲುವ ಗುರಿ ನಮ್ಮ ಮುಂದಿದೆ. ಮತದಾರರೂ ಸಹ ನಮಗೆ ಆಶೀರ್ವಾದಿಸುತ್ತಾರೆ ಎನ್ನುವ ವಿಶ್ವಾಸವನ್ನು ಬೊಮ್ಮಾಯಿ ವ್ಯಕ್ತಪಡಿಸಿದರು.

# ಸ್ಕೌಟ್-ಗೈಡ್ ಭವಿಷ್ಯಕ್ಕೆ ಸಹಕಾರಿ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸ್ಕೌಟ್ ಮತ್ತು ಗೈಡ್ ತರಬೇತಿ ಪಡೆಯುವುದರಿಂದ ಶಿಸ್ತು, ಸಮಯ ಪ್ರಜ್ಞೆ ಹಾಗೂ ಜ್ಞಾನ ಬೆಳವಣಿಗೆ, ದೇಶಭಕ್ತಿ, ಸಾಮಾಜಿಕ ಸೇವಾ ಮನೋಭಾವ ಹೆಚ್ಚಿಸಿಕೊಳ್ಳಲು ಸಹಕಾರಿಯಾಗುತ್ತದೆ ಎಂದು ಸಂಚಾಲಕಿ ಕೆ.ಎಸ್. ಗಾಣಿಗೇರ ಹೇಳಿದರು.

ಪಟ್ಟಣದ ಸರಕಾರಿ ಮಾದರಿ ಹಿರಿಯ ಹೆಣ್ಣುಮಕ್ಕಳ ಪ್ರಾಥಮಿಕ ಶಾಲೆಯಲ್ಲಿ ಐದು ದಿನಗಳ ಸ್ಕೌಟ್ ಮತ್ತು ಗೈಡ್ ತರಬೇತಿ ಶಿಬಿರದಲ್ಲಿ ಬೇಡನ್ ಪೊವೆಲ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿ, ಮಕ್ಕಳು ಪ್ರಾಥಮಿಕ ಹಂತದಲ್ಲಿ ಸ್ಕೌಟ್ ಮತ್ತು ಗೈಡ್ ತರಬೇತಿ ಪಡೆಯುವುದರಿಂದ ಭವಿಷ್ಯದ ಜೀವನಕ್ಕೆ ಸಹಕಾರಿಯಾಗಲಿದ್ದು, ಅಭ್ಯಾಸದಲ್ಲಿ ಏಕಾಗ್ರತೆ, ಸಮಯ ಪರಿಪಾಲನೆ, ಸೇವಾ ಮನೋಭಾವನೆ, ದೇಶದ ಬಗ್ಗೆ ಅಭಿಮಾನ ಬೆಳೆಯುತ್ತದೆ. ಈ ತರಬೇತಿ ಶಿಬಿರದ ಪ್ರಯೋಜನವನ್ನು ಎಲ್ಲಾ ಮಕ್ಕಳು ಪಡೆದುಕೊಳ್ಳಬೇಕು ಎಂದರು.

ಶಾಲಾ ಪ್ರಧಾನ ಗುರು ಡಾ. ಸಂಗಮೇಶ ತಮ್ಮನಗೌಡ್ರ, ಪಿ.ಎಸ್. ಮರಿದೇವರಮಠ, ವಿ.ವೈ. ನವಲೆ, ಎಸ್.ಪಿ. ಸರ್ವದೆ, ಶೋಭಾ ಪಾಟೀಲ್, ಆರ್.ಎಂ. ರೋಣದ ಇದ್ದರು.

# ಸಿಬ್ಬಂದಿಗೆ ತಾಂತ್ರಿಕ ತರಬೇತಿ ಅಗತ್ಯವಿದೆ

▶▶ ಮೊದಲನೇ ಪುಟದಿಂದ


ಅಪರಾಧ ಪ್ರಕರಣಗಳನ್ನು ಪತ್ತೆ ಮಾಡಿದರೆ ಸಾಲದು. ಅಪರಾಧಿಗಳು ಮಾಡಿದ ಅಪರಾಧ ಸಾಬೀತಾಗಿ, ಅವರಿಗೆ ಶಿಕ್ಷೆ ಆಗುವವರೆಗೆ ಫಾಲೋಅಫ್ ಮಾಡಬೇಕು. ಸಾರ್ವಜನಿಕರ ಸಹಕಾರವಿಲ್ಲದೆ ನಮ್ಮ ಕರ್ತವ್ಯ ಪೂರ್ಣವಾಗುವುದಿಲ್ಲ. ಸಾರ್ವಜನಿಕರ ಶಾಂತಿ, ಸುರಕ್ಷತೆ ಮತ್ತು ಸುವ್ಯವಸ್ಥೆ ಬಗ್ಗೆ ಪೊಲೀಸ್ ಇಲಾಖೆ ಕಾಳಜಿ ವಹಿಸುವದರಿಂದ ಜನರೊಂದಿಗೆ ಇಲಾಖೆಯ ಸಂಬಂಧ ಉತ್ತಮವಾಗಿ ಬೆಳೆಯುತ್ತದೆ ಎಂದರು.

ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ.ಗೋಪಾಲ ಬ್ಯಾಕೋಡ ಸ್ವಾಗತಿಸಿ, ಕಳೆದ ಸಾಲಿನ ಪೊಲೀಸ್ ಕಲ್ಯಾಣ ಚಟುವಟಿಕೆಗಳ ವರದಿ ಮಂಡಿಸಿದರು.

ಆಕಾಶವಾಣಿ ಹಿರಿಯ ಉದ್ಘೋಷಕಿ ಮಾಯಾ ರಾಮನ್ ಕಾರ್ಯಕ್ರಮ ನಿರೂಪಿಸಿದರು. ಹೆಚ್ಚುವರಿ ಪೊಲೀಸ್ ಅಧೀಕ್ಷಕ ನಾರಾಯಣ ಬರಮನಿ ವಂದಿಸಿದರು. ಕಾರ್ಯಕ್ರಮದಲ್ಲಿ ಧಾರವಾಡ ಕೇಂದ್ರ ಕಾರಾಗೃಹ ಅಧೀಕ್ಷಕ ಡಾ. ಕೆ.ಎಂ. ಮರಿಗೌಡ ಸೇರಿದಂತೆ ಜಿಲ್ಲೆಯ ಹಿರಿಯ ಪೊಲೀಸ್ ಅಧಿಕಾರಿಗಳು, ಎಲ್ಲ ಠಾಣೆಗಳ ಸಿಪಿಐಗಳು, ನಿವೃತ್ತ ಹಿರಿಯ ಪೊಲೀಸ್ ಅಧಿಕಾರಿಗಳು, ಸಿಬ್ಬಂದಿಗಳು, ಪೊಲೀಸ್ ಕುಟುಂಬಗಳ ಸದಸ್ಯರು, ಸಾರ್ವಜನಿಕರು ಭಾಗವಹಿಸಿದ್ದರು.

# ನಿಧನ ವಾರ್ತೆ

### ಅನಿಲ ಕುಲಕರ್ಣಿ



ನರೇಗಲ್ಲ, ಪಟ್ಟಣದ ದತ್ತಾತ್ರೇಯ ದೇವಸ್ಥಾನ ಹತ್ತಿರದ ನಿವಾಸಿ ಅನಿಲ ಪಾಂಡುರಂಗ ಕುಲಕರ್ಣಿ (57) ಭಾನುವಾರ ನಿಧನರಾದರು. ಮೃತರಿಗೆ ಸಹೋದರ, ಸಹೋದರಿ ಸೇರಿದಂತೆ ಅಪಾರ ಬಂಧು-ಬಳಗವಿದೆ.

### ಸಾಂಬಪ್ಪ (ಜಂಬಣ್ಣ) ಮಲ್ಲಪ್ಪ ಪಲ್ಲೇದ



ನರೇಗಲ್ಲ: ಸಮೀಪದ ಜಕ್ಕಲಿ ಗ್ರಾಮದ ನಿವಾಸಿ ಸಾಂಬಪ್ಪ (ಜಂಬಣ್ಣ) ಮಲ್ಲಪ್ಪ ಪಲ್ಲೇದ (71) ಮಂಗಳವಾರ ನಿಧನರಾದರು. ಮೃತರು ನರೇಗಲ್ಲ ಶ್ರೀ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆಯಲ್ಲಿ ದ್ವಿತೀಯ ದರ್ಜೆ ಗುಮಾಸ್ತರಾಗಿ ಸುಮಾರು 40 ವರ್ಷಗಳ ಕಾಲ ಸೇವೆಯನ್ನು ಸಲ್ಲಿಸಿ ನಿವೃತ್ತಿ ಹೊಂದಿದ್ದರು.

ಮೃತರಿಗೆ ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿ, ನಾಲ್ಕು ಜನ ಸಹೋದರರು, ನಾಲ್ಕು ಜನ ಸಹೋದರಿಯರು ಸೇರಿದಂತೆ ಅಪಾರ ಬಂಧು-ಬಳಗದವರು ಇದ್ದಾರೆ. ಮೃತರ ಅಂತ್ಯಕ್ರಿಯೆ ಏ.3ರ ಮುಂಜಾನೆ 11ಕ್ಕೆ ಅವರ ಸ್ವಂತ ಜಮೀನಿನಲ್ಲಿ ನೆರವೇರಲಿದೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

## ಭಾವಸಾರ ಕ್ಷತ್ರಿಯ ಸಮಾಜದ ದಿಂಡಿ ಉತ್ಸವದ ನಿಮಿತ್ತ ಸನ್ಮಾನ ಸಮಾರಂಭ

# ಸಾಧನೆಗೆ ಗುರಿ ಇರಬೇಕು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಾಧನೆ ಮಾಡಬೇಕೆನ್ನುವವರಿಗೆ ಮೊದಲು ಗುರಿ ಇರಬೇಕು. ಇದರ ಜೊತೆಗೆ ಕಠಿಣ ಪರಿಶ್ರಮ, ಶ್ರದ್ಧೆ, ನಿಷ್ಠೆಗಳನ್ನು ಮೈಗೂಡಿಸಿಕೊಂಡಲ್ಲಿ ಉನ್ನತ ಸಾಧನೆ ಮಾಡುವದು ಅಸಾಧ್ಯವೇನಲ್ಲ. ಅಲ್ಲದೆ, ಪ್ರತಿಭೆಗಳಿಗೆ ಯಾವುದೇ ಜಾತಿ, ಮತ ಪಂಥಗಳು ಇರುವದಿಲ್ಲ ಎಂದು ಅನುಜಾ ಪೂಜಾರ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಭಾವಸಾರ ಕ್ಷತ್ರಿಯ ಸಮಾಜದ ವತಿಯಿಂದ ಪಾಂಡುರಂಗ ದೇವಸ್ಥಾನದಲ್ಲಿ ದಿಂಡಿ ಉತ್ಸವದ ಅಂಗವಾಗಿ ಸೋಮವಾರ ರಾತ್ರಿ ದೇವಸ್ಥಾನದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಸಂಗೀತ, ಬಾರೂಢ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳ ಸನ್ಮಾನ ಸಮಾಜರಂಭದಲ್ಲಿ ಮಾತನಾಡಿದರು.

ಪ್ರತಿಯೊಂದು ಸಮಾಜದವರೂ ನಮ್ಮ ಸಮಾಜ ಸಣ್ಣದು ಎನ್ನುವ ಭಾವನೆ ದೂರ ಮಾಡಿಕೊಳ್ಳಬೇಕಾಗಿದೆ. ಎಲ್ಲ ಸಮಾಜಗಳು ಇಂದು ಸಾಕಷ್ಟು ಪ್ರಗತಿಯನ್ನು ಕಾಣುತ್ತಿವೆ. ದೇವನೊಬ್ಬ ನಾಮಹಲವು ಎನ್ನುವಂತೆ ದೇವರು ಎಲ್ಲರಿಗೂ ಒಂದೇ ಆಗಿದ್ದಾನೆ. ಹಿರಿಯರು, ಸಂಸ್ಕೃತಿ-ಸಂಪ್ರದಾಯಗಳನ್ನು ಮಕ್ಕಳಲ್ಲಿ



ಬೆಳೆಸುವ ಕಾರ್ಯವನ್ನು ಸಮಾಜದ ಹಿರಿಯರು ಮಾಡಬೇಕಾಗಿದೆ. ಇಂದು ಸನ್ಮಾನಗೊಳ್ಳುತ್ತಿರುವ ಮಕ್ಕಳು ಉತ್ತಮ ಸಾಧನೆ ಮಾಡಿರುವದು ಸಮಾಜಕ್ಕೆ ಹೆಮ್ಮೆಯ ಸಂಗತಿ ಎಂದರು.

ಎಸ್‌ಎಸ್‌ಎಲ್‌ಸಿಯಲ್ಲಿ ಹೆಚ್ಚಿನ ಅಂಕಗಳನ್ನು ಗಳಿಸಿದ ಶ್ರೇಷ್ಠಾ ನವಲೆ, ಸ್ಕ್ವಾಯ್ ಮಾರ್ಷಲ್ ಆರ್ಟ್ ಕ್ರೀಡೆಯಲ್ಲಿ ಸಾಧನೆಗೈದ ಮಾನ್ಯತಾ ಶಿವಪ್ರಸಾದ ಕೋಟಿಮಠ ಹಾಗೂ ಮನೋಜ್ಞಾ ಕೋಟಿಮಠ ಇವರುಗಳನ್ನು ಸನ್ಮಾನಿಸಲಾಯಿತು. ಸಭೆಯ ಅಧ್ಯಕ್ಷತೆಯನ್ನು ಸಮಾಜದ ಹಿರಿಯ ಪುಂಡಲೀಕ ಮಾತಾಡೆ ವಹಿಸಿದ್ದರು. ಅತಿಥಿಗಳಾಗಿ ಸರಸ್ವತಿ ಅಗಡಿ, ವಿ.ಎಲ್. ಪೂಜಾರ, ಸತೀಶ ಮಾಂಡ್ರೆ, ಸಂತೋಷ ಸರ್ವದೆ, ವಾಸು ಬೋಮಲೆ, ಅರುಣ ನವಲೆ, ಪ್ರವೀಣ ಬೋಮಲೆ, ಶಂಕರ ಮಾತಾಡೆ, ಪ್ರವೀಣ ಮಾತಾಡೆ, ಸಂಜೀವ ಮಾಂಡ್ರೆ, ರಮೇಶ ನವಲೆ, ವೆಂಕಟೇಶ ಮಾತಾಡೆ ಸೇರಿ ಅನೇಕರಿದ್ದರು.

ಪ್ರಭಾಕರ ಬೋಮಲೆ ಸ್ವಾಗತಿಸಿದರು. ಬಿಂಕದಕಟ್ಟಿ, ಖಂಡೋಬಾ ನವಲೆ ನಿರೂಪಿಸಿದರು. ಕಿರಣ ನವಲೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಿಯಾಂಕಾ ಹಾವೇರಿ, ಶ್ರೀಹರಿ ಕ್ಷತ್ರಿಯ, ಕೃಷ್ಣ ಕ್ಷತ್ರಿಯ ಇವರಿಂದ ಸಂಗೀತ ಸೇವೆ, ನಂತರ ಬಾರೂಢ ಕಾರ್ಯಕ್ರಮ ಜರುಗಿತು.

> ಚಂದ್ರಣ್ಣ ಮಹಾಜನಶೆಟ್ಟರ ಮಾತನಾಡಿ, ಸನ್ಮಾನಗಳು ಜವಾಬ್ದಾರಿಯನ್ನು ಹೆಚ್ಚಿಸುವದರ ಜೊತೆಗೆ ಇನ್ನೂ ಹೆಚ್ಚಿನ ಸಾಧನೆ ಮಾಡಬೇಕೆಂಬ ಹಂಬಲ ಬೆಳೆಸುತ್ತದೆ. ಸಾಧನೆ ಮಾಡಬೇಕೆಂಬ ಇಚ್ಛೆಯಿಂದ ಸಾಗಿದರೆ ಎಲ್ಲರೂ ಸಾಧನೆ ಮಾಡಬಹುದು. ಆದರೆ ನಮ್ಮಲ್ಲಿರುವ ಕೀಳರಿಮೆಯಿಂದ ನಾವು ಹಿಂದುಳಿಯುವಂತಾಗಿದೆ. ನಮ್ಮ ಸಂಸ್ಕೃತಿ-ಸಂಪ್ರದಾಯಗಳನ್ನು ನಮ್ಮ ಮಕ್ಕಳಿಗೆ ಕಲಿಸಿಕೊಡುವದು ಇಂದಿನ ಅಗತ್ಯವಾಗಿದೆ. ಭಾವಸಾರ ಕ್ಷತ್ರಿಯ ಸಮಾಜ ಇಂದು ಪಟ್ಟಣದಲ್ಲಿ ಎಲ್ಲರೂ ಮೆಚ್ಚುವಂತೆ ಪಾಂಡುರಂಗ ದೇವಸ್ಥಾನವನ್ನು ನಿರ್ಮಾಣ ಮಾಡಿರುವದು ಅವರ ಕಾರ್ಯತತ್ಪರತೆಗೆ ಸಾಕ್ಷಿಯಾಗಿದೆ ಎಂದರು.

# ಚುನಾವಣಾ ಜಾಗೃತಿ ಜಾಥಾ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ನರಗುಂದ

ಲೋಕಸಭಾ ಚುನಾವಣೆ-2024ರ ಅಂಗವಾಗಿ ಭಾರತ ಚುನಾವಣಾ ಆಯೋಗದ ನಿರ್ದೇಶನದ ಮೇರೆಗೆ ತಾ.ಪಂ ನರಗುಂದ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ನರಗುಂದ ಹಾಗೂ ಆರೋಗ್ಯ ಇಲಾಖೆ ಇವರ ಸಹಯೋಗದಲ್ಲಿ ತಾಲೂಕಿನ ಶಿರೋಳ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಚುನಾವಣಾ ಜಾಗೃತಿ ಜಾಥಾ ಕಾರ್ಯಕ್ರಮ ಜರುಗಿತು.

ನರಗುಂದ-68 ಸಹಾಯಕ ಚುನಾವಣಾಧಿಕಾರಿಗಳಾದ ಡಾ. ಹಂಪಣ್ಣ ಸಜ್ಜನ್ ಮಾತನಾಡಿ, ಮತದಾನ ಎಂಬುದು ಪ್ರತಿ ಭಾರತೀಯನ ಹಕ್ಕು. ಅದನ್ನು ಸ್ವಯಂ ಪ್ರೇರಿತವಾಗಿ ಚಲಾವಣೆ ಮಾಡುವಂತಾಗಬೇಕು. ಅಲ್ಲದೇ ಮೇ-7ರಂದು ಕಡ್ಡಾಯ ಮತ ಚಲಾವಣೆಯಾಗಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಚುನಾವಣಾ ಜಾಗೃತಿ ಕುರಿತು ಚುನಾವಣಾ ಆಯೋಗದಿಂದ 2 ನಿಮಿಷಗಳ



ವಿಡಿಯೋ ಚಿತ್ರಣವನ್ನು ಪ್ರಚುರಪಡಿಸಲಾಯಿತು.

ಸಭೆಯಲ್ಲಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಸೋಮಶೇಖರ ಬಿರಾದಾರ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರದೀಪ ನಾಡಗೇರ, ವೈದ್ಯಾಧಿಕಾರಿ ಡಾ. ಪಂಕಜಾ ಮೈತ್ರಿ, ಪಿಡಿಓ ವಾಯ್.ಬಿ. ಸಂಕನಗೌಡ್ರ, ಮೇಲ್ವಿಚಾರಕಿಯರು, ಅಂಗನವಾಡಿ ಕಾರ್ಯಕರ್ತೆಯರು, ಆರೋಗ್ಯ ಇಲಾಖೆ ಸಿಬ್ಬಂದಿ, ಪಂಚಾಯತ ಸಿಬ್ಬಂದಿಗಳು ಹಾಜರಿದ್ದರು.

ಧಾರವಾಡ ಜಿಲ್ಲಾಡಳಿತದಿಂದ ವಿನೂತನ ಪ್ರಯತ್ನ | ಬರಪರಿಹಾರ ಕಾರ್ಯಕ್ರಮಗಳ ಕುರಿತು ರೈತರಿಗೆ ಮನವರಿಕೆ

# ‘ರೈತರೊಂದಿಗೆ ನಾವಿದ್ದೇವೆ’ ಅಭಿಯಾನ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕಳೆದ ಸೆಪ್ಟೆಂಬರ್ ಮತ್ತು ಅಕ್ಟೋಬರ್‌ನಲ್ಲಿ ರಾಜ್ಯ ಸರ್ಕಾರವು ಧಾರವಾಡ ಜಿಲ್ಲೆ ಪೂರ್ಣ ಬರಪೀಡಿತ ಜಿಲ್ಲೆಯೆಂದು ಘೋಷಿಸಿತು. ಅಂದಿನಿಂದ ಧಾರವಾಡ ಜಿಲ್ಲಾಡಳಿತವು ಜನ, ಜಾನುವಾರುಗಳಿಗೆ ಅಗತ್ಯವಾದ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಮತ್ತು ಜನರಿಗೆ ನರೇಗಾ ಯೋಜನಯಡಿ ಉದ್ಯೋಗ ನೀಡಲು ಕಾರ್ಯಾರಂಭ ಮಾಡಿತು.

ಕುಡಿಯುವ ನೀರಿನ ಸಮಸ್ಯೆ ಕಂಡುಬಂದ ಗ್ರಾಮಗಳಿಗೆ ಈಗಾಗಲೇ ಖಾಸಗಿ ಕೊಳವೆ ಬಾವಿಗಳ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ. ಜಾನುವಾರುಗಳಿಗೆ ಅಗತ್ಯವಿರುವ ಮೇವು ಸರಬರಾಜು ಮಾಡಲು ಜಿಲ್ಲೆಯ ವಿವಿಧ ಸ್ಥಳಗಳಲ್ಲಿ 7 ಮೇವು ಬ್ಯಾಂಕಗಳನ್ನು ತರೆಯಲಾಗಿದ್ದು, ಈಗಾಗಲೇ ರೈತರು ಮೇವು ಖರೀದಿ ಮಾಡುತ್ತಿದ್ದಾರೆ.

ರೈತರಿಗೆ ಮೇವು ಬ್ಯಾಂಕ್, ಮೇವು ಮಾರಾಟದ ಬಗ್ಗೆ ಮಾಹಿತಿ ನೀಡಲು ಮತ್ತು



ಬರ ಪರಿಸ್ಥಿತಿಯಲ್ಲಿ ರೈತರಿಗೆ ಧೈರ್ಯ ತುಂಬಲು ಧಾರವಾಡ ಜಿಲ್ಲಾಡಳಿತವು ‘ರೈತರೊಂದಿಗೆ ನಾವಿದ್ದೇವೆ...’ ಎಂಬ ವಿನೂತನ ಅಭಿಯಾನವನ್ನು ಆರಂಭಿಸಿದೆ.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಜಿಲ್ಲೆಯ ರೈತರಿಗೆ ಕುಡಿಯುವ ನೀರು, ಜಾನುವಾರು ಮೇವು ಲಭ್ಯತೆಯ ಬಗ್ಗೆ ಮಾಹಿತಿ ನೀಡಲು ಮತ್ತು ಬರಪರಿಹಾರ ಪೂರಕ ಸೌಲಭ್ಯ ದೊರಕಿಸಲು ಅನುಕೂಲವಾಗುವಂತೆ ಕಂದಾಯ ಇಲಾಖೆ, ಪಶು ಇಲಾಖೆ ಹಾಗೂ ಪಂಚಾಯತ ರಾಜ್ ಇಲಾಖೆಗಳ ಸಹಯೋಗದಲ್ಲಿ ರೈತರಿಗೆ ಸರ್ಕಾರ, ಜಿಲ್ಲಾಡಳಿತ ನಿಮ್ಮ ನೆರವಿಗೆ ಇದೆ ಎಂಬುದನ್ನು ತಿಳಿಸಲು ಈ ವಿನೂತ ಅಭಿಯಾನ ಆರಂಭಿಸಲಾಗಿದೆ ಎಂದು ತಿಳಿಸಿದ್ದಾರೆ.

ಜಿಲ್ಲೆಯ ಧಾರವಾಡ ತಾಲೂಕಿನ ಮಾದನಬಾವಿಯಲ್ಲಿ ಫೆ.28ರಂದು ಮೊದಲ ಮೇವು ಬ್ಯಾಂಕ್ ತೆರೆಯಲಾಗಿತ್ತು. ಧಾರವಾಡ ತಾಲೂಕಿನ ಮಾಧನಬಾವಿ, ಧಾರವಾಡ ಎಪಿಎಂಸಿ., ಹುಬ್ಬಳ್ಳಿ ತಾಲೂಕಿನ ಶರೇವಾಡ ಮತ್ತು ಶಿರಗುಪ್ಪಿ, ಕಲಘಟಗಿ ಎ.ಪಿ.ಎಂ.ಸಿ., ಕುಂದಗೋಳ ಎ.ಪಿ.ಎಂ.ಸಿ., ನವಲಗುಂದ ಎ.ಪಿ.ಎಂ.ಸಿ. ಸೇರಿ ಒಟ್ಟು 7 ಸ್ಥಳಗಳಲ್ಲಿ ರೈತರ ಬೇಡಿಕೆಯಂತೆ ಈಗಾಗಲೇ ಜಿಲ್ಲಾಡಳಿತದಿಂದ ಮೇವು ಬ್ಯಾಂಕ್ ತೆರೆಯಲಾಗಿದೆ.

ಯಾವುದೇ ಒತ್ತಡಗಳಿಗೆ ಒಳಗಾಗದೇ ರೈತರು ತಮ್ಮ ಜಾನುವಾರುಗಳನ್ನು ಜೋಪಾನ ಮಾಡಬೇಕು. ಜಿಲ್ಲೆಯಲ್ಲಿ ಮುಂದಿನ 8 ವಾರಗಳಿಗೆ ಆಗುವಷ್ಟು ಮೇವು ಲಭ್ಯವಿದೆ. ರೈತರು ಸಹ ಮೇವಿನ ಬಣವೆ ಹೊಂದಿದ್ದಾರೆ. ಜಿಲ್ಲಾಡಳಿತದಿಂದ ಜಿಲ್ಲೆಯ ಎಪಿಎಂಸಿಗಳು ಸೇರಿದಂತೆ 7 ಸ್ಥಳಗಳಲ್ಲಿ ಮೇವು ಬ್ಯಾಂಕ್ ಸ್ಥಾಪಿಸಲಾಗಿದೆ. ಈ ಮಾಹಿತಿಯನ್ನು ಪ್ರತಿ ರೈತರಿಗೆ ತಲುಪಿಸಲಾಗುತ್ತಿದೆ ಎಂದು ಹೇಳಿದ್ದಾರೆ.

ಏ.2ರ ಬೆಳಿಗ್ಗೆ ಎಸಿ ಶಾಲಂ ಹುಸೇನ್, ತಹಸೀಲ್ದಾರ ಡಾ. ಡಿ.ಎಚ್. ಹೂಗಾರ ಹಾಗೂ ಪಶುಪಾಲನಾ ಇಲಾಖೆಯ ಉಪನಿರ್ದೇಶಕ ಡಾ. ರವಿ ಸಾಲಿಗೌಡರ ನೇತೃತ್ವದಲ್ಲಿ ಧಾರವಾಡ ತಾಲೂಕಾಡಳಿತದಿಂದ ಧಾರವಾಡ ಹಳೆ ಎಪಿಎಂಸಿಯ ದನಗಳ (ಮಾರಾಟ) ಸಂತೆ ಜಾಗದಲ್ಲಿ ರೈತರಿಗೆ ಧ್ವನಿವರ್ಧಕ ಬಳಸಿ ಜಾಗೃತಿ ಮೂಡಿಸುವ ಮೂಲಕ ಅಭಿಯಾನ ಆರಂಭಿಸಲಾಯಿತು.

ಧಾರವಾಡ, ಹುಬ್ಬಳ್ಳಿ ಮತ್ತು ಕಲಘಟಗಿ ಮೇವು ಬ್ಯಾಂಕ್‌ಗಳಿಂದ ಈಗಾಗಲೇ ಸುಮಾರು 38 ಜನ ರೈತರು 24.02 ಟನ್ ಮೇವು ಖರೀದಿಸಿದ್ದಾರೆ. ಮೇವು ಬ್ಯಾಂಕ್‌ಗಳಲ್ಲಿ ಒಟ್ಟು ಸಂಗ್ರಹಿತ 47.16 ಟನ್ ಮೇವಿನಲ್ಲಿ ಇನ್ನೂ 23.14 ಟನ್ ಮೇವು ಮಾರಾಟಕ್ಕೆ ಲಭ್ಯವಿದೆ. ರೈತರ ಬೇಡಿಕೆಗೆ ಅನುಗುಣವಾಗಿ ಮೇವು ಪೂರೈಸಲು ಜಿಲ್ಲಾಡಳಿತ ಸಿದ್ಧವಿದೆ ಎಂದು ತಿಳಿಸಲಾಗಿದೆ.

ಮೇವು ಲಭ್ಯತೆ, ದಾಸ್ತಾನು ಬಗ್ಗೆ ಹಾಗೂ ಕುಡಿಯುವ ನೀರಿನ ಕೊರತೆ ಇಲ್ಲ ಎಂಬುವುದರ ಬಗ್ಗೆ ಸಾಕಷ್ಟು ಸಲ ಮಾಧ್ಯಮ, ಗ್ರಾಮ ಪಂಚಾಯಿತಿಗಳ ಮೂಲಕ ರೈತರಿಗೆ ಮಾಹಿತಿ ನೀಡಲಾಗಿದೆ. ಈಗಲೂ ಕಂದಾಯ ಇಲಾಖೆ ಮತ್ತು ಗ್ರಾ.ಪಂ ಮೂಲಕ ಗ್ರಾಮಗಳಲ್ಲಿ ಡಂಗುರ ಸಾರಿ, ಸಾರ್ವಜನಿಕರಿಗೆ ಮಾಹಿತಿ ನೀಡಲು ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

## ತಾಲೂಕಾಡಳಿತದಿಂದ ಮೇವು ಬ್ಯಾಂಕ್ ಪ್ರಾರಂಭ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಜಿಲ್ಲಾಡಳಿತದ ನಿರ್ದೇಶನದ ಮೇರೆಗೆ ಮಂಗಳವಾರ ಶಿರಹಟ್ಟಿಯ ಕೃಷಿ ಉತ್ಪನ್ನ ಉಪ ಮಾರುಕಟ್ಟೆಯಲ್ಲಿ ತಾಲೂಕಾ ಆಡಳಿತದ ವತಿಯಿಂದ ಮೇವು ಬ್ಯಾಂಕ್‌ನ್ನು ಜಿ.ಪಂ ಮುಖ್ಯ ಯೋಜನಾಧಿಕಾರಿ ಹಾಗೂ ತಾಲೂಕಾ ನೋಡಲ್ ಅಧಿಕಾರಿ ನಿರ್ಮಲಾ ಎನ್.ಕೆ ರೈತರಿಗೆ ಮೇವು ವಿತರಿಸುವ ಮೂಲಕ ಉದ್ಘಾಟಿಸಿದರು.

ನಂತರ ಮಾತನಾಡಿದ ತಹಸೀಲ್ದಾರ ಅನಿಲ ಬಡಿಗೇರ, ಜಿಲ್ಲಾಡಳಿತದ ನಿರ್ದೇಶನದ ಮೇರೆಗೆ ಶಿರಹಟ್ಟಿಯಲ್ಲಿ ಮೇವು ಬ್ಯಾಂಕ್‌ನ್ನು ತೆರೆಯಲಾಗಿದ್ದು, ಸದ್ಯ 7.8 ಟನ್ ಮೇವು ಸಂಗ್ರಹವಿದೆ. ಜಾನುವಾರುಗಳನ್ನು ಹೊಂದಿದಂತಹ ರೈತರು ಪಶುವೈದ್ಯಾಧಿಕಾರಿಗಳ ದೃಢೀಕರಣದ ಮೇರೆಗೆ ಜಾನುವಾರುಗಳ ಸಂಖ್ಯೆಗೆ ಅನುಗುಣವಾಗಿ ಸರಕಾರ ನಿಗದಿಪಡಿಸಿದ ಪ್ರತಿ ಕೆಜಿಗೆ 2 ರೂ.ನಂತೆ ಮೇವು ವಿತರಿಸಲು ಕ್ರಮ ಕೈಕೊಳ್ಳಲಾಗಿದೆ.

ಬರಗಾಲವನ್ನು ಸಮರ್ಥವಾಗಿ ಎದುರಿಸುವ ಸಲುವಾಗಿ ಟಾಸ್ಕ್‌ಫೋರ್ಸ್ ಸಮಿತಿ ವತಿಯಿಂದ ಸಭೆ ನಡೆಸಲಾಗಿದ್ದು, ಇಲ್ಲಿಯವರೆಗೂ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಿಲ್ಲ. ಆದಾಗ್ಯೂ ಮುಂಜಾಗ್ರತಾ ಕ್ರಮವಾಗಿ ಗ್ರಾಮ ಪಂಚಾಯತ ಮಟ್ಟದಲ್ಲಿ ಇರುವಂತಹ ಖಾಸಗಿ ಬೋರ್‌ವೆಲ್‌ಗಳನ್ನು ಗುತ್ತಿಗೆ ಆಧಾರದ ಮೇಲೆ ತೆಗೆದುಕೊಳ್ಳಲು ಚರ್ಚಿಸಲಾಗಿದೆ ಎಂದರು.

ತಾ.ಪಂ ಇಓ ಪ್ರಶಾಂತ ರಾವ್, ಪಶು ವೈದ್ಯಾಧಿಕಾರಿ ಡಾ. ಎನ್.ಎಚ್. ಓಲೇಕಾರ, ಪ.ಪಂ ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ, ಕಂದಾಯ ಇಲಾಖೆಯ ಎಸ್.ಎಸ್. ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

## ಮತದಾರರ ಪ್ರತಿಜ್ಞಾವಿಧಿ ಬೋಧನೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಕೋಗನೂರ ಗ್ರಾಮದಲ್ಲಿ ಮೂಲಸೌಕರ್ಯ ಹಾಗೂ ಗಾಂವಠಾಣಾ ವಿಸ್ತರಣೆ ಸಲುವಾಗಿ ಚುನಾವಣಾ ಬಹಿಷ್ಕಾರಕ್ಕೆ ಮುಂದಾಗಿದ್ದ ಗ್ರಾಮಸ್ಥರಿಗೆ ಮಂಗಳವಾರ ಜಿಲ್ಲಾ ಹಾಗೂ ತಾಲೂಕಾ ಮಟ್ಟದ ಅಧಿಕಾರಿಗಳು ಗ್ರಾಮಕ್ಕೆ ತೆರಳಿ ಗ್ರಾಮಸ್ಥರಿಗೆ ಬೇಡಿಕೆ ಈಡೇರಿಸುವ ಭರವಸೆಯನ್ನು ನೀಡಿ ಮತದಾರರ ಪ್ರತಿಜ್ಞಾವಿಧಿ ಬೋಧಿಸುವಲ್ಲಿ ಯಶಸ್ವಿಯಾಗಿದ್ದಾರೆ.



ಈ ಕುರಿತು ಮಾತನಾಡಿದ ತಹಸೀಲ್ದಾರ ಅನಿಲ ಬಡಿಗೇರ, ಕೋಗನೂರ ಗ್ರಾಮಸ್ಥರು ಗ್ರಾಮದ ಮೂಲಸೌಕರ್ಯಕ್ಕೆ ಹಾಗೂ ಗಾಂವಠಾಣಾ ಜಾಗೆಯ ವಿಸ್ತರಣೆ ಸಲುವಾಗಿ ಚುನಾವಣಾ ಬಹಿಷ್ಕಾರ ಹಾಕುವುದಾಗಿ ಮನವಿಯನ್ನು ಸಲ್ಲಿಸಿದ್ದರು. ಇವರ ಅರ್ಜಿಯನ್ನು ಪರಿಶೀಲನೆ ನಡೆಸಿದಾಗ, ಗ್ರಾಮದಲ್ಲಿಯ ಗಾಂವಠಾಣಾ ಜಾಗೆಯು 1960ರಲ್ಲಿಯೇ ಭೂಸ್ವಾಧೀನ ಆಗಿದ್ದು ಕಂಡು ಬರುತ್ತಿದೆ. ಹೆಚ್ಚಿನ ಪರಿಶೀಲನೆ ನಡೆಸಿ, ಗ್ರಾಮಸ್ಥರ ಬೇಡಿಕೆಯನ್ನು ಈಡೇರಿಸಲು ಕ್ರಮ ವಹಿಸುವ ಬಗ್ಗೆ ಗ್ರಾಮಸ್ಥರಿಗೆ ಮನವರಿಕೆ ಮಾಡಿಕೊಡಲಾಯಿತು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಒಂದೊಂದು ಮತವೂ ಸಹ ಅತ್ಯಮೂಲ್ಯವಾಗಿದ್ದರಿಂದ ಯಾವುದೇ ಕಾರಣಕ್ಕೂ ಚುನಾವಣಾ ಮತದಾನದ ಬಹಿಷ್ಕಾರ ಮಾಡದಂತೆ ಮನವೊಲಿಸಿ ಮತದಾನದ ಮಹತ್ವವನ್ನು ಸಾರುವ ಮತದಾರರ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಈ ಬಗ್ಗೆ ಗ್ರಾಮಸ್ಥರು ಸಹ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಶಿರಹಟ್ಟಿ–65 ಸಹಾಯಕ ಚುನಾವಣಾಧಿಕಾರಿ ಅಮಿತ್ ಬಿದರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

## ದೇಶದ ಅಭಿವೃದ್ಧಿಗೆ ಮತ ಚಲಾಯಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರತಿಯೊಬ್ಬ ಮತದಾರರೂ ತಮ್ಮ ಹಕ್ಕು ಚಲಾಯಿಸಿಲು ಜಾಗೃತಿ ಮೂಡಿಸುವ ಕೆಲಸ ಮಾಡುತ್ತಿದ್ದು, ಶೇ.100ರಷ್ಟು ಕಡ್ಡಾಯ ಮತದಾನ ಮಾಡುವ ಮೂಲಕ ದೇಶದ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಪು.ಬಡ್ನಿ ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಬಸವರಾಜ ಬಳೂಟಗಿ ಹೇಳಿದರು.

ತಾಲೂಕಿನ ಪು.ಬಡ್ನಿ ಗ್ರಾಮದ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಸಮುದಾಯ ಕಾಮಗಾರಿ ಸ್ಥಳದಲ್ಲಿ ಮತದಾನದ ಕುರಿತು ಅರಿವು ಮೂಡಿಸಿ ಅವರು ಮಾತನಾಡಿ, ಸರ್ಕಾರ ಮತದಾನದಲ್ಲಿ ಪ್ರತಿಯೊಬ್ಬರೂ ಪಾಲ್ಗೊಳ್ಳಲು ಅನುವಾಗುವಂತೆ ಮತದಾನದ ದಿನ ರಜೆ ಘೋಷಿಸಿದೆ.

ಮಹಿಳೆಯರು ತಮ್ಮ ಹಕ್ಕುಗಳ ರಕ್ಷಣೆಗೆ ಉತ್ತಮ ಜನಪ್ರತಿನಿಧಿ ಆಯ್ಕೆಯ ಅಧಿಕಾರ ಬಳಸಿ, ಮತದಾನದಲ್ಲಿ ತಪ್ಪದೇ ಪಾಲ್ಗೊಳ್ಳಿ ಎಂದು ಕಿವಿಮಾತು ಹೇಳಿದರು.

ಮತದಾನ ಜನ ಸಾಮಾನ್ಯರ ಪವಿತ್ರ ಕರ್ತವ್ಯ. ಒಂದು ದೇಶದ ಪ್ರಗತಿ ಮತದಾನದಿಂದ ಎಂಬ ಸತ್ಯದ ಅರಿವು ಮೂಡಿಸುವ ಅಗತ್ಯವಿದೆ. ನಾವು ಮತ ಹಾಕದಿದ್ದರೆ ಏನಾಗುತ್ತದೆ ಎಂದು ನಕಾರಾತ್ಮಕವಾಗಿ ಮಾತನಾಡುವವರನ್ನೂ ಮನವೊಲಿಸಿ ಮತ ಚಲಾಯಿಸಲು ಪ್ರೇರೇಪಿಸಿ ಎಂದರು.

ಬಿಎಫ್‌ಟಿ ತಿರಕಪ್ಪ ಬಾಲೆಹೊಸೂರ ಪ್ರತಿಜ್ಞಾವಿಧಿ ಬೋಧಿಸಿದರು. ಟಿಎಇ ವೀರಯ್ಯ ಅಳವಂಡಿಮಠ, ಪಂಚಾಯಿತಿ ಸಿಬ್ಬಂದಿ ಹಜರೇಸಾಬ್ ಸರಾವರಿ, ಸಿದಪ್ಪ ಹರದಗಟ್ಟಿ, ನರೇಗಾ ಕಾಯಕ ಬಂಧುಗಳು ಇದ್ದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಿಂದ ಮನವಿ

## ವ್ಯಾಪಾರಸ್ಥರು, ರೈತರಿಗೆ ಅನುಕೂಲ ಕಲ್ಪಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಿಂದ ಕೃಷಿ ಮಾರುಕಟ್ಟೆ ಕಾಯ್ದೆ ತಿದ್ದುಪಡಿ ವಿಷಯ ಕುರಿತು ಈಗಾಗಲೇ ಸಂಸ್ಥೆಯಲ್ಲಿ ಚರ್ಚಿಸಿ ಕೆಲವೊಂದು ವಿಷಯಗಳನ್ನು ತಿದ್ದುಪಡಿ ಮಾಡಿ ವ್ಯಾಪಾರಸ್ಥರಿಗೆ ಮತ್ತು ರೈತರಿಗೆ ಅನುಕೂಲ ಮಾಡಿಕೊಡುವಂತೆ ಕೋರಿ ಗದಗ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಸಹಾಯಕ ಕಾರ್ಯದರ್ಶಿ ಎಂ.ಆರ್. ನದಾಫ ಇವರಿಗೆ ಮನವಿ ಸಲ್ಲಿಸಿ ಒತ್ತಾಯಿಸಲಾಯಿತು.



ಸಂಸ್ಥೆಯ ಉಪಾಧ್ಯಕ್ಷ ಶರಣಬಸಪ್ಪ ಎಸ್.ಗುಡಿಮನಿ, ಸಂಸ್ಥೆಯ ಎಪಿಎಂಸಿ ಉಪ ಸಮಿತಿ ಚೇರಮನ್ ಶರಣಪ್ಪ ಕೆ.ಕುರಡಗಿ ಇವರನ್ನೊಳಗೊಂಡ ನಿಯೋಗದೊಂದಿಗೆ ಗದಗ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಭೇಟಿ ನೀಡಿ, ಚರ್ಚಿಸಿ ಮನವಿ ಸಲ್ಲಿಸಿದರು.

ಹೊಸದಾಗಿ ಉದ್ಯಮಗಳನ್ನು ಸ್ಥಾಪಿಸಿದ ಸಂಸ್ಥೆಗೆ ಕೃಷಿ ಹುಟ್ಟುವಳಿಗಳನ್ನು ಖರೀದಿಸಲು ರೈತರಿಂದ ನೇರವಾಗಿ ಖರೀದಿ ಮಾಡಿದ ಮತ್ತು ಕಮೀಷನ್ ಏಜೆಂಟರಿಂದ ಖರೀದಿಸಿದ ಹುಟ್ಟುವಳಿಗಳಿಗೆ ಸೆಸ್‌ನಲ್ಲಿ ರಿಯಾಯತಿ ನೀಡುವುದು, ಎಪಿಎಂಸಿಕಚೇರಿ ಅಧಿಕಾರಿಗಳು ವ್ಯಾಪಾರಸ್ಥರ ಸಂಸ್ಥೆ ಹಾಗೂ ಉದ್ಯಮಿಗಳ ಪ್ರಾಂಗಣಕ್ಕೆ ಹೋಗಿ ಪರಿಶೀಲನೆ ಮಾಡುವುದು ಸೂಕ್ತವಲ್ಲ. ವ್ಯಾಪಾರಸ್ಥರು ತಮ್ಮಲ್ಲಿ ಇರುವ ಹುಟ್ಟುವಳಿಗಳ ಸಂಗ್ರಹಣೆಯ ವಿವರವನ್ನು ಸ್ವಯಂ ಘೋಷಿತವಾಗಿ ನೀಡಲು ಅನುಕೂಲ ಮಾಡಿಕೊಡಬೇಕು. ಎಪಿಎಂಸಿ ಕಾಯ್ದೆ ತಿದ್ದುಪಡಿಯಿಂದ ಕೆಲಸದ ಒತ್ತಡ ಹೆಚ್ಚಾದ ಕಾರಣ, ಸಿಬ್ಬಂದಿಗಳನ್ನು ನೇಮಿಸಿ ವ್ಯಾಪಾರಸ್ಥರಿಗೆ ಅನುಕೂಲ ಮಾಡಿಕೊಡಬೇಕೆಂದು ಒತ್ತಾಯಿಸಿದರು.

ಸಂಸ್ಥೆಯ ಉಪಾಧ್ಯಕ್ಷ ಹರೀಶಕುಮಾರ ಎಸ್.ಶಹಾ, ಸಹ ಗೌರವ ಕಾರ್ಯದರ್ಶಿ ರಾಜಣ್ಣಾ ಬಿ.ಮಲ್ಲಾಡದ, ಕೋಶಾಧ್ಯಕ್ಷ ಅಶೋಕ ಕೆ.ಪಾಟೀಲ, ದಲಾಲ ವರ್ತಕರ ಸಂಘದ ಅಧ್ಯಕ್ಷ ಮುರುಘ ರಾಜೇಂದ್ರ ಎಂ.ಬಡ್ನಿ, ಎಪಿಎಂಸಿ ಖರೀದಿ ವರ್ತಕರ ಸಂಘದ ಅಧ್ಯಕ್ಷ ಶೇಖರಪ್ಪ ಫ.ಗದ್ದಿಕೇರಿ, ಸಂಸ್ಥೆಯ ಉಪ ಸಮಿತಿ ಸದಸ್ಯರಾದ ಸಿ.ಪಿ. ಹುಣಸಿಕಟ್ಟಿ, ಎಚ್.ಆರ್. ಶಾಪೂರ, ಸಿದ್ದರಾಮಪ್ಪ ಎ. ಉಮಚಗಿ, ಸದಸ್ಯರಾದ ರವೀಂದ್ರ ಗದಗ, ಪ್ರಮೋದ ವಾರಕರ ಸೇರಿದಂತೆ ಅನೇಕ ವ್ಯಾಪಾರಸ್ಥರು ಉಪಸ್ಥಿತರಿದ್ದರೆಂದು ಸಂಸ್ಥೆಯ ಗೌ.ಕಾರ್ಯದರ್ಶಿ ಪ್ರಕಾಶ ಎಸ್. ಉಗಲಾಟದ ತಿಳಿಸಿದ್ದಾರೆ.

## ತೆಲಂಗಾಣದಲ್ಲಿ ಬೆಂಕಿ ಕೆಂಡವಾದ ಬಿಸಿಲು: ಐಎಂಡಿಯಿಂದ 16 ಜಿಲ್ಲೆಗಳಿಗೆ ಹೀಟ್‌ವೇವ್ ಎಚ್ಚರಿಕೆ

■ವಿಜಯಸಾಕ್ಷಿ ಸುದ್ದಿ, ಹೈದರಾಬಾದ್

ತೆಲಂಗಾಣ ರಾಜ್ಯದಲ್ಲಿ ಬಿಸಿಲಿನ ತಾಪಮಾನದ ಅಬ್ಬರ ಜೋರಾಗಿದೆ. ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಸಹ ಈ ವರ್ಷ ಸಾಮಾನ್ಯ ಬೇಸಿಗೆಯ ತಾಪಮಾನಕ್ಕಿಂತಲೂ ಹೆಚ್ಚು ಉಷ್ಣಾಂಶ ದಾಖಲಾಗಿದೆ ಎಂದು ಹೇಳಿದೆ.

ಏಪ್ರಿಲ್ ತಿಂಗಳ ಆರಂಭದಲ್ಲೇ ಬಿಸಿಲಿನ ತಾಪವು ಏರಿಕೆಯಾಗುತ್ತಿದೆ. ಹೈದರಾಬಾದ್ ಕೂಡ ತೀವ್ರವಾದ ಬಿಸಿಲಿನ ಹೊಡೆತಕ್ಕೆ ಸಿಲುಕಿದೆ. ತಾಪಮಾನವು 40 ಡಿಗ್ರಿ ಸೆಲ್ಸಿಯಸ್ ದಾಟಿದೆ. ಉಷ್ಣಾಂಶದ ಏರಿಕೆಯಿಂದ ನಗರದ ನಿವಾಸಿಗಳನ್ನು ಚಿಂತೆಗೀಡುಮಾಡಿದೆ. ಸೂರ್ಯನ ಬಿಸಿಲಿನ ಪ್ರಖರತೆಯನ್ನು ಎದುರಿಸಲು ಜನರು ಛತ್ರಿ, ಸ್ಕಾರ್ಫ್‌ಗಳ ಮೊರೆ ಹೋಗಿದ್ದಾರೆ. ರಸ್ತೆ ಬದಿಯ ಸ್ಟಾಲ್‌ಗಳಲ್ಲಿ ಲಭ್ಯವಿರುವ ರಿಫ್ರೆಶ್‌ಮೆಂಟ್‌ಗಳಲ್ಲಿ ತಂಪು ಪಾನೀಯ ಮತ್ತು ಹಣ್ಣುಗಳ ಮೂಲಕ ಪರಿಹಾರ ಕಂಡಕೊಳ್ಳಲು ಮುಂದಾಗಿದ್ದಾರೆ.

ಉಪ್ಪಲ್‌ನಲ್ಲಿ 43.3 ಡಿಗ್ರಿ ಸೆಲ್ಸಿಯಸ್, ಸಿರಿಲಿಂಗಂಪಲ್ಲಿಯಲ್ಲಿ 43.1 ಡಿಗ್ರಿ ಸೆಲ್ಸಿಯಸ್, ಕುತ್ಬುಳ್ಳಾಪುರದಲ್ಲಿ 43.3 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ. ಹಯತ್‌ನಗರ, ಖೈರತಾಬಾದ್ ಮತ್ತು ಸರೂರ್‌ನಗರದಲ್ಲಿ ಕ್ರಮವಾಗಿ 42.7, 42.1, 42 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ. ಕುಕಟ್‌ಪಲ್ಲಿಯಲ್ಲಿ 42 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದೆ.

## ರಾಜ್ಯದಲ್ಲಿ ಬಿಜೆಪಿ ವಿರುದ್ಧ ಇಂಡಿಯಾ ಒಕ್ಕೂಟದಿಂದ ಒಗ್ಗಟ್ಟಿನ ಹೋರಾಟ: ಡಿ.ಕೆ.ಶಿವಕುಮಾರ್

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಲೋಕಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ ಇಂಡಿಯಾ ಒಕ್ಕೂಟದಿಂದ ಒಗ್ಗಟ್ಟಾಗಿ ಬಿಜೆಪಿ ವಿರುದ್ಧ ಹೋರಾಟ ಮಾಡುತ್ತೇವೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು. ಕೆಪಿಸಿಸಿ ಕಚೇರಿಯಲ್ಲಿ ಇಂದು ಇಂಡಿಯಾ ಮೈತ್ರಿಕೂಟದ ಅಂಗಪಕ್ಷಗಳ ಕರ್ನಾಟಕ ಘಟಕದ ಮುಖಂಡರ ಜತೆ ಸಮಾಲೋಚನೆ ನಡೆಸಿದ ಬಳಿಕ ಮಾತನಾಡಿದ ಅವರು, ಬೆಂಗಳೂರು ನಗರದಲ್ಲಿ ಇಂಡಿಯಾ ಒಕ್ಕೂಟ ಜನ್ಮ ತಾಳಿತು. ಜನ ಬದಲಾವಣೆ ನಿರೀಕ್ಷೆ ಮಾಡುತ್ತಿದ್ದಾರೆ. ಜನ ನಮ್ಮ ಮೇಲಿನ ನಂಬಿಕೆ ಉಳಿಸಲು 10 ಪ್ರಮುಖ ಪಕ್ಷಗಳು ಚರ್ಚೆ ಮಾಡಿದ್ದೇವೆ. ಅವರ ಸಂಖ್ಯೆ ಮುಖ್ಯವಲ್ಲ. ಅವರದೇ ಆದ ಸಿದ್ಧಾಂತ ನಂಬಿಕೊಂಡು ಪಕ್ಷ ನಡೆಸುತ್ತಿದ್ದಾರೆ ಎಂದರು.

ಎನ್‌ಡಿಎ ಸೋಲಿಸಬೇಕು ಎಂಬ ಉದ್ದೇಶದೊಂದಿಗೆ ಒಗ್ಗಟ್ಟಾಗಿ ಹೋರಾಟ ಮಾಡಲು ತೀರ್ಮಾನಿಸಿದ್ದೇವೆ. ಚುನಾವಣಾ ಬಾಂಡ್‌ನಲ್ಲಿ ಬಂದ ತೀರ್ಪು, ತನಿಖಾ ಸಂಸ್ಥೆಗಳ ದುರ್ಬಳಕೆ ಎಲ್ಲದರ ಬಗ್ಗೆ ಚರ್ಚಿಸಿ



ಖಂಡಿಸಿದ್ದೇವೆ. ಒಗ್ಗಟ್ಟಿನಿಂದ ಚುನಾವಣೆಯನ್ನು ಎದುರಿಸಲು ನಿರ್ಧರಿಸಿದ್ದೇವೆ. ಬೂತ್ ನಿಂದ ಹಿಡಿದು ರಾಜ್ಯದಲ್ಲಿ ಒಟ್ಟಾಗಿ ಹೋರಾಟ ಮಾಡುತ್ತೇವೆ. ಕೋಮುವಾದಿ ಸರ್ವಾಧಿಕಾರ ವರ್ಸಸ್ ಪ್ರಜಾಪ್ರಭುತ್ವ. ಇದು ನಮ್ಮ ಲೀಡ್ ಲೈನ್ ಆಗಿರಲಿದೆ. 28ಕ್ಕೆ 28 ಸ್ಥಾನವನ್ನೂ ನಾವು ಗೆಲ್ಲುತ್ತೇವೆ ಎಂದು ಇಂಡಿಯಾ ಒಕ್ಕೂಟದ ಪ್ರತಿನಿಧಿಗಳು ವಿಶ್ವಾಸ ವ್ಯಕ್ತಪಡಿಸಿದ್ದಾರೆ ಎಂದು ಹೇಳಿದರು.

ಎಎಪಿ ರಾಜ್ಯಾಧ್ಯಕ್ಷ ಮುಖ್ಯಮಂತ್ರಿ ಚಂದ್ರು ಮಾತನಾಡಿ, ದೇಶ ಇಕ್ಕಟ್ಟು ಹಾಗೂ ಬಿಕ್ಕಟ್ಟಿನಲ್ಲಿ ಸಿಲುಕಿದೆ. 10 ವರ್ಷ ಬಿಜೆಪಿ ಆಡಳಿತದ ವೈಖರಿ ನೋಡಿದರೆ ಭಯದ ವಾತಾವರಣ ಇದೆ. ಹೀಗಾಗಿ ನಾವು ಈ ಬಾರಿ ಒಗ್ಗಟ್ಟಿನಿಂದ ಹೋರಾಟ ಮಾಡುತ್ತೇವೆ. ಕೇಜ್ರಿವಾಲ್‌ರನ್ನು ಬಂಧನ ಮಾಡಿದ್ದಾರೆ. ಬಂಧನ ಆಗಿರುವುದು ಪ್ರಜಾಪ್ರಭುತ್ವ, ಫ್ರೀಜ್ ಆಗಿರುವುದು ಸಂವಿಧಾನ. ರಾಜಕೀಯ ದ್ವೇಷ, ಪಿತೂರಿ ನಡೆಯುತ್ತಿದೆ. ರಾಮಮಂದಿರ ಮೂಲಕ ಆಧ್ಯಾತ್ಮಿಕ ಸರ್ವಾಧಿಕಾರಿ ವರ್ತನೆ ತೋರುತ್ತಿದ್ದಾರೆ ಎಂದು ಕಿಡಿಕಾರಿದರು.

ಚುನಾವಣಾ ಬಾಂಡ್ ವಿಚಾರದಲ್ಲಿ ಬ್ರಹ್ಮಾಂಡ ಭ್ರಷ್ಟಾಚಾರ ಆಗಿದೆ. ಏಕ ಭಾಷೆ, ಬಟ್ಟೆ, ಊಟ, ಏಕ ವ್ಯಕ್ತಿಯ ಮನೋಭಾವನೆ ಇದೆ. ಆ ಮೂಲಕ ದೇಶದ ವಿವಿಧತೆಯನ್ನು ಸರ್ವನಾಶ ಮಾಡಲು ಹೊರಟಿದ್ದಾರೆ. ಕೋರ್ಟ್‌ನಿಂದ ಹಿಡಿದು ಎಲ್ಲರಿಗೂ ಬೆದರಿಕೆ ಹಾಕುತ್ತಿದ್ದಾರೆ. ವಿನಾಶ ಕಾಲದ ಕುರುಹು ಆಗಿದ್ದಾರೆ ಮೋದಿ. ಸರ್ವಾಧಿಕಾರ ತೊಲಗಿಸಿ, ಪ್ರಜಾಪ್ರಭುತ್ವ ಉಳಿಸುವ ಕೆಲಸ ಮಾಡುತ್ತೇವೆ. ಬಿಜೆಪಿಯವರೇ ಅಧಿಕಾರ ಬಿಟ್ಟು ತೊಲಗಿ ಎಂದು ನಾವು ಹೇಳಬೇಕಾಗಿದೆ ಎಂದು ವಾಗ್ದಾಳಿ ನಡೆಸಿದರು.

ಸಭೆಯಲ್ಲಿ ಸಚಿವ ಡಾ.ಎಂ.ಸಿ.ಸುಧಾಕರ್, ಕೆಪಿಸಿಸಿ ಮಾಧ್ಯಮ ಘಟಕದ ಅಧ್ಯಕ್ಷ ರಮೇಶ್ ಬಾಬು, ಸಹ ಅಧ್ಯಕ್ಷರಾದ ಐಶ್ವರ್ಯ ಮಹದೇವ್, ಆಪ್‌ನ ಪೃಥ್ವಿರೆಡ್ಡಿ, ಸಿಪಿಎಂ ಪ್ರಧಾನ ಕಾರ್ಯದರ್ಶಿ ಬಸವರಾಜು, ಎನ್‌ಸಿಪಿ ರಾಜ್ಯಾಧ್ಯಕ್ಷ ಸಿ ಎಸ್ ಇನಾಂದಾರ್, ಸಿಪಿಐ ಎಂಎಲ್ ಪ್ರಧಾನ ಕಾರ್ಯದರ್ಶಿ ಕ್ಲಿಫ್ಟನ್ ಡಿ ರೊಜೆರಿಯೋ, ರಾಷ್ಟ್ರೀಯ ಜನತಾದಳ ರಾಜ್ಯಾಧ್ಯಕ್ಷ ಯಾಕುಬ್ ಗುಲ್ವಾಡಿ, ಫಾರ್ವರ್ಡ್ ಬ್ಲಾಕ್ ರಾಜ್ಯಾಧ್ಯಕ್ಷ ಶಿವಶಂಕರ್ ಮತ್ತಿತರರು ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka